ಸಂಪಾದಕರು: ದರ್ಶನ್.ಟಿ
Editor : DARSHAN.T

# ನಮ್ಮ ಜನ
# NAMMA JANA

ಕನ್ನಡ ದಿನ ಪತ್ರಿಕೆ
Kannada Daily

ಸಂಪುಟ – 01 | ಸಂಚಿಕೆ – 281 | ಶೀರ್ಷಿಕೆ ಕೋಡ್: ಕೆಎಆರ್ ಕೆಎಎನ್ 28269 | ಚಿತ್ರದುರ್ಗ | ದಿನಾಂಕ: 30–05–2024 ಗುರುವಾರ | ಪುಟ: 4 | ಬೆಲೆ : ರೂ.2–00
Volume - 01 | Issue - 281 | Title- Code: KARKAN 28269 | Chitradurga | Date: 30-05-2024 Thursday | Page: 4 | Price: Rs. 2-00

ಒಳಪುಟದ ಸುದ್ದಿಗಳು
ಹೊಸಶೈಕ್ಷಣ ಯುಗ ಆರಂಭಿಸಲು ಶಿಕ್ಷಣ ಇಲಾಖೆ ಸರ್ವಸಿದ್ಧತೆ 2
ತ್ಯಾಜ್ಯ ನಿರ್ವಹಣೆಗೆ ಒತ್ತು ನೀಡುವ ಮೂಲಕ ಪರಿಸರ ಸಂರಕ್ಷಣೆ ಕುರಿತು ಕಾನೂನು ಅರಿವು 3
ಆಧುನಿಕ ಭಾರತದಲ್ಲಿ ಸ್ತ್ರೀವಾದ ಮತ್ತು ಶಿಕ್ಷಣ 4

ಸುದ್ದಿ, ಜಾಹಿರಾತಿಗೆ 9686622252

**ಶುಭ ನುಡಿ**

ಬಟ್ಟೆ ನೋಡಿ ಗೆಳೆತನ ಮಾಡಬೇಡ, ಗುಣ ನೋಡಿ ಗೆಳೆತನ ಮಾಡು , ಯಾಕೆಂದರೆ ಬಟ್ಟೆ ಹರಿದು ಹೋಗುವ ತನಕ ಮಾತ್ರ ಇರುತ್ತದೆ, ಗುಣ ಸಾಯುವವರೆಗೂ ಇರುತ್ತದೆ !!

» ಶುಭೋದಯ

# ಕೃಷಿ ಇಲಾಖಾ ಕಾರ್ಯಕ್ರಮಗಳ ಯಶಸ್ವಿ ಅನುಷ್ಠಾನ: ಚಿತ್ರದುರ್ಗ ಜಿಲ್ಲೆಗೆ ಮೂರು ಪ್ರಶಸ್ತಿ

» ಚಿತ್ರದುರ್ಗ

2023–24ನೇ ಸಾಲಿನಲ್ಲಿ ಕೃಷಿ ಇಲಾಖೆಯ ವಿವಿಧ ಯೋಜನೆ, ಕಾರ್ಯಕ್ರಮಗಳ ಸಮಗ್ರ ಅನುಷ್ಠಾನದಲ್ಲಿ ಅತ್ಯುತ್ತಮ ಸಾಧನೆ ಮಾಡಿದ ಚಿತ್ರದುರ್ಗ ಜಿಲ್ಲೆಗೆ ದ್ವಿತೀಯ ಸ್ಥಾನ ಹಾಗೂ ಕೃಷಿ ಇಲಾಖೆಯ ಮಣ್ಣು ಪರೀಕ್ಷಾಪ್ರಯೋಗಾಲಯಗಳಲ್ಲಿಅತ್ಯುತ್ತಮ ಸಾಧನೆ ಮಾಡಿದ ಚಿತ್ರದುರ್ಗ ಜಿಲ್ಲೆಯ ಮಣ್ಣು ಪರೀಕ್ಷಾ ಪ್ರಯೋಗಾಲಯಕ್ಕೆ ಪ್ರಥಮ ಸ್ಥಾನ ಹಾಗೂ ಮಹಾತ್ಮಾ ಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತ್ರಿ ಯೋಜನೆ (ನರೇಗಾ) ಕಾರ್ಯಕ್ರಮದಲ್ಲಿ ಅತ್ಯುತ್ತಮ ಸಾಧನೆ ಮಾಡಿದ ಚಿತ್ರದುರ್ಗ ಜಿಲ್ಲೆಗೆ ಪ್ರಥಮ ಸ್ಥಾನ ಲಭಿಸಿದ್ದು, ಈಚೆಗೆ ಬೆಂಗಳೂರಿನಲ್ಲಿ ಜರುಗಿದ ಪ್ರಸಕ್ತ ಸಾಲಿನ ರಾಜ್ಯಮಟ್ಟದ ಮುಂಗಾರು ಹಂಗಾಮಿನ ಕಾರ್ಯಾಗಾರದಲ್ಲಿ ಪ್ರಶಂಸನಾ ಪತ್ರ ನೀಡಿ ಪುರಸ್ಕರಿಸಲಾಗಿದೆ.

ಜಿಲ್ಲೆಗೆ ಕೃಷಿ ಇಲಾಖಾ ಕಾರ್ಯಕ್ರಮಗಳ ಅನುಷ್ಠಾನದಲ್ಲಿ ಇಲಾಖೆಯ ವಿವಿಧ ಯೋಜನೆಗಳನ್ನು ಕಾಲಾನುಕಾಲಕ್ಕೆ ರೈತರಿಗೆ ತಲುಪಿಸಿ ತಾಂತ್ರಿಕ ಮಾಹಿತಿ ಒದಗಿಸಿ, ಬರಗಾಲದ ಪರಿಸ್ಥಿತಿಯಲ್ಲಿ ಇಳುವರಿ ಪಡೆದು, ಜೀವನ ನಿರ್ವಹಣೆಗೆ ಸುಲಲಿತಗೊಳಿಸಲು ರೈತರಿಗೆ ಭರವಸೆ ನೀಡಿದ ಕಾರ್ಯಕ್ರಮಗಳ ಯಶಸ್ವಿ ಅನುಷ್ಠಾನಕ್ಕೆ ಎರಡನೇ ಅತ್ಯುತ್ತಮ ಜಿಲ್ಲೆಯೆಂದು ಪ್ರಶಸ್ತಿ ಪಡೆದಿದೆ.

"ನಾವು ಸತ್ತರೆ ಮಣ್ಣಿಗೆ, ಮಣ್ಣು ಸತ್ತರೆ ಎಲ್ಲಿಗೆ", "ಮಣ್ಣಿನ ಆರೋಗ್ಯದಿಂದ ಬೆಳೆಗಳ ಆರೋಗ್ಯ – ನಮ್ಮ ಆರೋಗ್ಯ" ಈ ನಿಟ್ಟಿನಲ್ಲಿ ಗ್ರಾಮಗಳಲ್ಲಿ ಮಣ್ಣು ಅಭಿಯಾನ ಕಾರ್ಯಕ್ರಮದಡಿ ಮಣ್ಣು ಪರೀಕ್ಷೆ ಮಹತ್ವ, ಮಣ್ಣು ಪರೀಕ್ಷೆ ಆಧಾರದ ಮೇಲೆ ರಸಗೊಬ್ಬರಗಳ ಸಮರ್ಥ ಬಳಕೆ ಕುರಿತು ಸಕಾಲದಲ್ಲಿ ಮಾಹಿತಿ ನೀಡಿದ ಮಣ್ಣು ಆರೋಗ್ಯ ಕೇಂದ್ರ ಚಿತ್ರದುರ್ಗವು ರಾಜ್ಯದಲ್ಲಿ ಪ್ರಥಮ ಸ್ಥಾನಕ್ಕೆ ಭಾಜನರಾಗಿರುವುದು ಹೆಮ್ಮೆಯ ವಿಷಯವಾಗಿದೆ.








ಮಣ್ಣು ಹಾಗೂ ನೀರು ಸಂರಕ್ಷಣೆ ಕುರಿತು ಜಲಾನಯನ ಇಲಾಖೆಯ ಮಹಾತ್ಮ ಗಾಂಧಿ ರಾಷ್ಟ್ರೀಯ ಉದ್ಯೋಗ ಖಾತ್ರಿ ಯೋಜನೆಯಡಿ ಬದು ನಿರ್ಮಾಣ, ಕೃಷಿ ಹೊಂಡ, ಅರಣ್ಯ ಹಾಗೂ ತೋಟಗಾರಿಕೆ ಚಟುವಟಿಕೆಗಳ ಮೂಲಕ ಮಣ್ಣು ಮತ್ತು ನೀರು ಸಂರಕ್ಷಣೆ ಮಾಡುವುದರ ಜೊತೆಗೆ ಕೃಷಿ ಕಾರ್ಮಿಕರಿಗೆ ಉದ್ಯೋಗ ಕಲ್ಪಿಸುವ ಮೂಲಕ ಉತ್ತಮ ಪ್ರಗತಿ ಸಾಧಿಸಿ ಜಿಲ್ಲೆಯು ರಾಜ್ಯದಲ್ಲಿ ಪ್ರಥಮ ಸ್ಥಾನ ಪಡೆದು ಮತ್ತೊಂದು ಗರಿ ಮುಡಿಗೇರಿಸಿಕೊಂಡಿದೆ.

ಪ್ರಶಸ್ತಿಗೆ ಭಾಜನರಾದ ಹಿನ್ನಲೆಯಲ್ಲಿ ಕೃಷಿ ಇಲಾಖೆ ಅಧಿಕಾರಿಗಳು ಜಿಲ್ಲಾಧಿಕಾರಿ ಜಿ.ವೆಂಕಟೇಶ್, ಜಿಲ್ಲಾ ಪಂಚಾಯಿತಿ ಸಿಇಒ ಎಸ್.ಜೆ.ಸೋಮಶೇಖರ್ ಹಾಗೂ ಉಪವಿಭಾಗಾಧಿಕಾರಿ ಎಂ.ಕಾರ್ತಿಕ್ ಅವರಿಗೆ ಅಭಿನಂದಿಸಿದರು.

ಈ ಸಂದರ್ಭದಲ್ಲಿ ಕೃಷಿ ಇಲಾಖೆ ಜಂಟಿ ನಿರ್ದೇಶಕ ಮಂಜುನಾಥ್, ಉಪ ಕೃಷಿನಿರ್ದೇಶಕರಾದ ಶಿವಕುಮಾರ್, ಪ್ರಭಾಕರ್ ಸೇರಿದಂತೆ ಕೃಷಿ ಇಲಾಖೆಯ ಸಹಾಯಕ ಕೃಷಿ ನಿರ್ದೇಶಕರು, ಮಣ್ಣು ಆರೋಗ್ಯ ಕೇಂದ್ರದ ಸಹಾಯಕ ಕೃಷಿ ನಿರ್ದೇಶಕರು, ವಿಷಯ ತಜ್ಞರು ಇದ್ದರು.

## ಫಾಸ್ಟ್ ನ್ಯೂಸ್

### ಮೇ.30ರಂದು ಕೀಟಜನ್ಯ ರೋಗಗಳ ನಿಯಂತ್ರಣ ಕುರಿತು ಜಾಗೃತಿ ಕಾರ್ಯಕ್ರಮ

» ಚಿತ್ರದುರ್ಗ

ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ಹಾಗೂ ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ವತಿಯಿಂದ ಇದೇ ಮೇ.30ರಂದು ಬೆಳಿಗ್ಗೆ 11ಕ್ಕೆ ನಗರದ ಪತ್ರಕರ್ತರ ಭವನದಲ್ಲಿ ಪತ್ರಿಕಾ ಮತ್ತು ದೃಶ್ಯ ಮಾಧ್ಯಮ ಪ್ರತಿನಿಧಿಗಳಿಗೆ ಮಲೇರಿಯಾ ಮತ್ತು ಇತರೆ ಕೀಟಜನ್ಯ ರೋಗಗಳ ನಿಯಂತ್ರಣದ ಕುರಿತು ಜಾಗೃತಿ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ. ಜಾಗೃತಿ ಕಾರ್ಯಕ್ರಮದಲ್ಲಿ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ.ಜಿ.ಪಿ.ರೇಣುಪ್ರಸಾದ್, ಜಿಲ್ಲಾ ರೋಗವಾಹಕ ಆಶ್ರಿತ ರೋಗಗಳ ನಿಯಂತ್ರಣಾಧಿಕಾರಿ ಡಾ.ಕಾಶೀ, ಜಿಲ್ಲಾ ಕೀಟಶಾಸ್ತ್ರಜ್ಞೆ ನಂದಿನಿ ಕಡಿ, ಹೆಲ್ತ್ ಸೂಪರ್ ವೈಸರ್ ಸುರೇಶಬಾಬು, ಹಿರಿಯ ಆರೋಗ್ಯ ನಿರೀಕ್ಷಕ ಮಲ್ಲಿಕಾರ್ಜುನ್, ಜಿಲ್ಲಾ ವಾರ್ತಾಧಿಕಾರಿ ಆರ್.ಮಾರುತಿ, ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ಜಿಲ್ಲಾ ಘಟಕದ ಅಧ್ಯಕ್ಷ ಬಿ.ದಿನೇಶ್ ಗೌಡಗೆರೆ ಭಾಗವಹಿಸುವರು.

### ಸಿ.ಟಿ.ಸ್ಕ್ಯಾನ್‌ಗೆ ಪರ್ಯಾಯ ವ್ಯವಸ್ಥೆ

» ಚಿತ್ರದುರ್ಗ

ಜಿಲ್ಲಾ ಆಸ್ಪತ್ರೆಯಲ್ಲಿರುವ ಸಿ.ಟಿ.ಸ್ಕ್ಯಾನ್ ಯಂತ್ರವು ಸಿಡಿಲು ಅವಘಡದಿಂದ ದುರಸ್ಥಿಯಲ್ಲಿದ್ದು, ತಾತ್ಕಾಲಿಕವಾಗಿ ಚಿತ್ರದುರ್ಗ ನಗರದ ತುರುನೂರು ರಸ್ತೆಯ ಪೋರ್ಟ್ ಸಿಟಿ ಡಯೋಗ್ನಿಸ್ಟಿಕ್ ಸೆಂಟರ್, ಬೇಸ್‌ಮೆಂಟ್ ಆಫ್ ಸಿಎಂಹೆಚ್ ಅಸ್ಪತ್ರೆಯಲ್ಲಿ ಪರ್ಯಾಯ ವ್ಯವಸ್ಥೆ ಕಲ್ಪಿಸಿದ್ದು, ಸರ್ಕಾರ ನಿಗಧಿಪಡಿಸಿದ ಶುಲ್ಕದಂತೆಯೇ ಸಿ.ಟಿ.ಸ್ಕ್ಯಾನ್ ಮಾಡಲಾಗುತ್ತದೆ. ಎ.ಬಿ–ಎ.ಆರ್. ಕೆ ಅಡಿಯಲ್ಲಿ ನೋಂದಣಿಯಾದ ರೋಗಿಗಳಿಗೆ ಉಚಿತವಾಗಿ ಸಿ.ಟಿ.ಸ್ಕ್ಯಾನ್ ಮಾಡಲಾಗುತ್ತದೆ ಎಂದು ಚಿತ್ರದುರ್ಗ ಜಿಲ್ಲಾ ಆಸ್ಪತ್ರೆ ಜಿಲ್ಲಾ ಶಸ್ತ್ರಚಿಕಿತ್ಸಕ ಡಾ.ಎಸ್.ಪಿ.ರವೀಂದ್ರ ತಿಳಿಸಿದ್ದಾರೆ.

### ರಂಗಶಿಕ್ಷಣ ಡಿಪ್ಲೋಮಾಕ್ಕೆ ಅರ್ಜಿ ಆಹ್ವಾನ

» ಚಿತ್ರದುರ್ಗ

ರಾಜ್ಯ ಸರ್ಕಾರದಿಂದ ಮಾನ್ಯತೆ ಪಡೆದಿರುವ ಶ್ರೀ ಶಿವಕುಮಾರ ರಂಗಪ್ರಯೋಗ ಶಾಲೆಯು 2024–25ನೇ ಸಾಲಿನ ರಂಗಶಿಕ್ಷಣಕ್ಕೆ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನಿಸಿದೆ. ಪ್ರವೇಶಕ್ಕೆ ಕನಿಷ್ಟ ವಿದ್ಯಾರ್ಹತೆ ಎಸ್ಎಸ್ಎಲ್‌ಸಿ ಉತ್ತೀರ್ಣರಾಗಿರಬೇಕು. ಪದವೀಧರರಿಗೆ ಆದ್ಯತೆ ಇರುತ್ತದೆ. ರಂಗಭೂಮಿಯಲ್ಲಿ ಆಸಕ್ತಿ ಇದ್ದು, ಸ್ವಲ್ಪಮಟ್ಟಿನ ಅನುಭವ ಇರಬೇಕಾದದ್ದು ಅಗತ್ಯ. ವಿದ್ಯಾರ್ಥಿ ವಿದ್ಯಾರ್ಥಿನಿಯರಿಗೆ ಊಟ–ವಸತಿ ವ್ಯವಸ್ಥೆ ದೊರೆಯುತ್ತದೆ. ಕರ್ನಾಟಕ ಹಾಗೂ ಭಾರತದ ರಂಗತಜ್ಞರಿಂದ ಮತ್ತು ಅತಿಥಿ ಉಪನ್ಯಾಸಕರಿಂದ ತರಗತಿಗಳು ನಡೆಯುತ್ತವೆ. ಗ್ರಂಥಭಂಡಾರ ಹಾಗೂ ದೃಶ್ಯ, ಶ್ರವ್ಯ, ಪರಿಕರಗಳ ಅನುಕೂಲತೆ ಇದೆ. ರಂಗಶಾಲೆಗಳಲ್ಲಿ ವಿದ್ಯಾರ್ಥಿಗಳಿಗೆ ಭಾರತೀಯ ರಂಗಭೂಮಿ, ಕನ್ನಡ ಮತ್ತು ನಾಟಕ ಸಾಹಿತ್ಯ ಪರಂಪರೆ, ಪಾಶ್ಚಾತ್ಯ ರಂಗಭೂಮಿ, ಆಹಾರ್ಯ, ಶಿಕ್ಷಣದಲ್ಲಿ ರಂಗಭೂಮಿ, ಕುರಿತಾದ ಸೈದ್ಧಾಂತಿಕ ಮತ್ತು ಪ್ರಾಯೋಗಿಕ ತರಗತಿಗಳು ನಡೆಯುತ್ತವೆ. ಪ್ರಾಚಾರ್ಯರು, ಶ್ರೀ ಶಿವಕುಮಾರ ರಂಗಪ್ರಯೋಗ ಶಾಲೆ, ಸಾಣೇಹಳ್ಳಿ–577515, ಹೊಸದುರ್ಗ ತಾಲ್ಲೂಕು, ಚಿತ್ರದುರ್ಗ ಜಿಲ್ಲೆ ಈ ವಿಳಾಸಕ್ಕೆ ಬರೆದು ಪ್ರವೇಶ ಅರ್ಜಿಗಳನ್ನು ತರಿಸಿಕೊಳ್ಳಬಹುದು ಅಥವಾ ನಮ್ಮ ರಂಗಶಾಲೆಯ ವೆಬ್‌ಸೈಟ್ www.theatreschoolsanehlli.org ನಲ್ಲಿ ಪ್ರವೇಶ ಅರ್ಜಿಗಳನ್ನು ಡೌನ್‌ಲೋಡ್ ಮಾಡಿ ಜೂನ್ 25ರ ಒಳಗಾಗಿ ಅರ್ಜಿಯನ್ನು ರಂಗಶಾಲೆಗೆ ಸಲ್ಲಿಸುವುದು. ಹೆಚ್ಚಿನ ಮಾಹಿತಿಗಾಗಿ ದೂರವಾಣಿ ಸಂಖ್ಯೆ 9448398144–8861043553.

# ಕಾಂಗ್ರೆಸ್ ಸರ್ಕಾರದ ಆಡಳಿತದಲ್ಲಿ ಶಿಕ್ಷಣ ಇಲಾಖೆ ಅಭಿವೃದ್ಧಿಗೆ ಹಿನ್ನಡೆ: ಮಾಜಿ ಶಾಸಕ ತಿಪ್ಪೇಸ್ವಾಮಿ

» ಚಳ್ಳಕೆರೆ

ಪ್ರಸ್ತುತ ರಾಜ್ಯದಲ್ಲಿ ಆಡಳಿತ ನಡೆಸುತ್ತಿರುವ ಕಾಂಗ್ರೆಸ್ ಸರ್ಕಾರದಿಂದ ಶಿಕ್ಷಣವೂ ಸೇರಿದಂತೆ ಎಲ್ಲಾ ಕ್ಷೇತ್ರಗಳಲ್ಲೂ ಹಿನ್ನಡೆಯಾಗಿದೆ. ಪ್ರಸ್ತುತ ಸರ್ಕಾರ ರಾಜ್ಯದ ಶೈಕ್ಷಣಿಕ ಬೆಳವಣಿಗೆ, ಸಮಸ್ಯೆಗಳ ಬಗ್ಗೆ ಗಮನಹರಿಸುತ್ತಿಲ್ಲ. ಆದ್ದರಿಂದ ಈ ಬಾರಿಯ ಆಗ್ನೇಯ ಶಿಕ್ಷಕರ ಕ್ಷೇತ್ರದಿಂದ ಬಿಜೆಪಿ ಬೆಂಬಲಿತ ಅಭ್ಯರ್ಥಿಯಾಗಿ ಹಾಲಿ ವಿಧಾನಪರಿಷತ್ ಸದಸ್ಯ, ವಿಶೇಷವಾಗಿ ಶಿಕ್ಷಣದ ಕ್ಷೇತ್ರದ ಬಗ್ಗೆ ಆಳಾವಾದ ಅಭ್ಯಾಸ ಮಾಡಿರುವ ವೈ.ಎ.ನಾರಾಯಣಸ್ವಾಮಿ ಯವರನ್ನು ಬೆಂಬಲಿಸಬೇಕೆಂದು ಮಾಜಿ ಶಾಸಕ ಎಸ್.ತಿಪ್ಪೇಸ್ವಾಮಿ ಮನವಿ ಮಾಡಿದರು.

ಅವರು, ಬುಧವಾರ ನಾಯಕನಹಟ್ಟಿ ಹೋಬಳಿಯ ಹಲವಾರು ಪ್ರೌಢಶಾಲೆಗಳಿಗೆ ಭೇಟಿ ನೀಡಿ ಅಭ್ಯರ್ಥಿ ವೈ.ಎ.ನಾರಾಯಣಸ್ವಾಮಿಪರ ಮತಯಾಚನೆ ಮಾಡಿದರು.

ವೈ.ಎ.ನಾರಾಯಣಸ್ವಾಮಿ ಈ ಭಾಗದ ಎಲ್ಲಾ ಶಿಕ್ಷಕರಿಗೆ ಚಿರಪರಿಚಿತ ವ್ಯಕ್ತಿಯಾಗಿದ್ದಾರೆ. ಶಿಕ್ಷಣ ಇಲಾಖೆಯ ಸರ್ವತೋಮುಖ ಅಭಿವೃದ್ಧಿಯ ಬಗ್ಗೆ ಸಾಕಷ್ಟು ಅಭ್ಯಾಸ ಮಾಡಿದ್ದಾರೆ. ನಿರಂತರವಾಗಿ ಶಿಕ್ಷಕರ ಸಮಸ್ಯೆಗಳಿಗೆ ಸ್ಪಂದಿಸುತ್ತಾ ಬಂದಿದ್ದಾರೆ. ಶಿಕ್ಷಕರು ಮೊದಲ ಪ್ರಾಶಸ್ತ್ಯ ಮತವನ್ನು ನೀಡಿ ಗೆಲ್ಲಿಸುವಂತೆ ಮನವಿ ಮಾಡಿದರು.

ಪುಟ ↘ 2



ಚಳ್ಳಕೆರೆ ತಾಲ್ಲೂಕಿನ ನಾಯಕನಹಟ್ಟಿ ಹೋಬಳಿಯ ಹಲವಾರು ಪ್ರೌಢಶಾಲೆಗಳಿಗೆ ಮಾಜಿ ಶಾಸಕ ಎಸ್.ತಿಪ್ಪೇಸ್ವಾಮಿ ಭೇಟಿ ನೀಡಿ ಅಭ್ಯರ್ಥಿ ವೈ.ಎ.ನಾರಾಯಣಸ್ವಾಮಿಪರ ಮತಯಾಚನೆ ಮಾಡಿದರು.

## ಪ್ರಮುಖ ಸುದ್ದಿ

# 2.70 ಕೋಟಿ ನೀರಿನ ಕಾಮಗಾರಿಗೆ ಅನುಮೋದನೆ

» ಚಿತ್ರದುರ್ಗ

2023–24ನೇ ಸಾಲಿನ ತುರ್ತು ಕುಡಿಯುವ ನೀರಿನ ಕಾಮಗಾರಿಗಳನ್ನು ಕೈಗೊಳ್ಳಲು ಒಟ್ಟು ರೂ.2.70 ಕೋಟಿ ವೆಚ್ಚದ ಟಾಸ್ಕ್ ಫೋರ್ಸ್ ಕ್ರಿಯಾ ಯೋಜನೆಗಳಿಗೆ ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಎಸ್.ಜೆ.ಸೋಮಶೇಖರ್ ಅಧ್ಯಕ್ಷತೆಯಲ್ಲಿ ಜರುಗಿದ ಜಿಲ್ಲಾ ನೀರು ಮತ್ತು ನೈರ್ಮಲ್ಯ ಮಿಷನ್ ಸಮಿತಿ ಸಭೆ ಅನುಮೋದನೆ ನೀಡಿದೆ.

ಈ ಕುರಿತು ಬುಧವಾರ ನಗರದ ಜಿ.ಪಂ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಸಭೆ ನಡೆಯಿತು.

ಜಿಲ್ಲೆಯ ಬರ ಪೀಡಿತ ತಾಲ್ಲೂಕುಗಳಲ್ಲಿ ತುರ್ತು ಕುಡಿಯುವ ನೀರಿನ ಕಾಮಗಾರಿಗಳನ್ನು ಕೈಗೊಳ್ಳಲು ರಾಜ್ಯ ಸರ್ಕಾರ ಪ್ರತಿ ತಾಲ್ಲೂಕುಗಳಿಗೆ ಮೊದಲ ಹಂತದಲ್ಲಿ ರೂ.25 ಲಕ್ಷದಂತೆ ಒಟ್ಟು ರೂ.150 ಲಕ್ಷ, ಎರಡನೇ ಹಂತದಲ್ಲಿ ರೂ. 20 ಲಕ್ಷದಂತೆ ಒಟ್ಟು ರೂ.120 ಲಕ್ಷ, ಮೂರನೇ ಹಂತದಲ್ಲಿ ರೂ.60.69 ಲಕ್ಷದಂತೆ



ಒಟ್ಟು ರೂ.364.15 ಲಕ್ಷ ಮಂಜೂರು ಮಾಡಿದೆ. ಮೊದಲ ಹಂತದಲ್ಲಿ ಬಿಡುಗಡೆ ಮಾಡಿದ ರೂ.150 ಲಕ್ಷಗಳಿಗೆ ಜಿಲ್ಲೆಯ ಆರು ತಾಲ್ಲೂಕುಗಳಲ್ಲಿ ಕುಡಿಯುವ ನೀರಿನ ಸರಬಾರಜಿಗೆ ಸಂಬಂಧಿಸಿದಂತೆ ಒಟ್ಟು 94 ಕಾಮಗಾರಿಗಳನ್ನು ಕೈಗೊಳ್ಳಲಾಗಿದೆ. ಎರಡನೇ ಹಂತದಲ್ಲಿ ಮಂಜೂರಾದ ರೂ.120 ಲಕ್ಷಗಳಿಗೆ 6 ತಾಲ್ಲೂಕುಗಳಿಂದ ಒಟ್ಟು 88 ಕಾಮಗಾರಿಗಳಿಗೆ ಕ್ರಿಯಾ ಯೋಜನೆ ತಯಾರಿಸಿ ಸಭೆಯ ಅನುಮೋದನೆ ಮಂಡಿಸಲಾಯಿತು. ಜಿಲ್ಲೆಗೆ ಮಂಜೂರಾದ ರೂ.364.15 ಲಕ್ಷಕ್ಕೆ ಸಂಬಂಧಿಸಿದಂತೆ ಮೊಳಕಾಲ್ಮೂರು ತಾಲ್ಲೂಕಿನ ರಾಂಪುರ ಹಾಗೂ ಇತರೆ ಗ್ರಾಮಗಳಿಗೆ ನೀರು ಸರಬರಾಜು ಮಾಡುವ ಹೊಸ ಪೈಪ್ ಲೈನ್ ಅಳವಡಿಕೆಗೆ ರೂ.60.60 ಲಕ್ಷ ವೆಚ್ಚದ 10 ಕಾಮಗಾರಿಗಳ ಕ್ರಿಯಾ ಯೋಜನೆಯನ್ನು ಸಭೆಯ ಮುಂದೆ ಮಂಡಿಸಲಾಯಿತು.

ಜಲ ಜೀವನ್ ಮಿಷನ್ ಯೋಜನೆಯಡಿ ಮನೆ–ಮನೆಗೆ ಕಾರ್ಯಾತ್ಮಕ ನಳ ನೀರು ಸಂಪರ್ಕಿಸುವ ವೇಳೆ, ಗ್ರಾಮಾಂತರ ಪ್ರದೇಶದಲ್ಲಿನ ಶಾಲೆ, ಆಸ್ಪತ್ರೆ, ಅಂಗನವಾಡಿ, ಹಾಸ್ಟೆಲ್‌ಗಳಿಗೆ ತಪ್ಪದೇ ಶುದ್ಧ ಕುಡಿಯುವ ನೀರಿನ ಸಂಪರ್ಕ ಕಲ್ಪಿಸುವಂತೆ ಜಿ.ಪಂ ಸಿಇಒ ಎಸ್.ಜೆ.ಸೋಮಶೇಖರ್ ಅಧಿಕಾರಿಗಳಿಗೆ ಸೂಚನೆ ನೀಡಿದರು.

ಸಭೆಯಲ್ಲಿ ಜಿ.ಪಂ ಉಪ ಕಾರ್ಯದರ್ಶಿ ತಿಮ್ಮಪ್ಪ, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ ಕಾರ್ಯ ಪಾಲಕ ಇಂಜಿನಿಯರ್ ಬಸವನಗೌಡ ಪಾಟೀಲ್, ಕೃಷಿ ಇಲಾಖೆ ಜಂಟಿ ನಿರ್ದೇಶಕ ಮಂಜುನಾಥ್, ಅರಣ್ಯ ಇಲಾಖೆ ಉಪ ಅರಣ್ಯ ಸಂರಕ್ಷಣಾಧಿಕಾರಿ ರಾಜಣ್ಣ, ಶಾಲಾ ಶಿಕ್ಷಣ ಇಲಾಖೆ ಉಪನಿರ್ದೇಶಕ ಎಂ.ನಾಸೀ□□ವುದ್ದೀನ್, ಪರಿಶಿಷ್ಟವರ್ಗಗಳ ಕಲ್ಯಾಣಾಧಿಕಾರಿ ಓ.ಪರಮೇಶ್ವರಪ್ಪ ಸೇರಿದಂತೆ ಆರೋಗ್ಯ ಇಲಾಖೆ ಡಾ.ಚಂದ್ರಶೇಖರ್ ಕಂಬಾಳಿ ಮಠ ಸೇರಿದಂತೆ ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆಯ ಸಹಾಯಕ ಕಾರ್ಯಪಾಲಕ ಅಭಿಯಂತರರು ಉಪಸ್ಥಿತರಿದ್ದರು.



| ಚಿನ್ನದ ಬೆಲೆ | |
|---|---|
| 91.6 ಕೆಡಿಎಂ (ಗ್ರಾಂ) | 5830 |
| 85 ಕೆಡಿಎಂ (ಗ್ರಾಂ) | 5330 |



| ಬೆಳ್ಳಿ ಬೆಲೆ | |
|---|---|
| ಕೆಜಿ | 67500 |



# ಶಿಕ್ಷಣದಿಂದ ಮಾತ್ರ ಸಾಧನೆ ಸಾಧ್ಯ: ಪಾಟೀಲ್

» ಚಿತ್ರದುರ್ಗ

ಶಿಕ್ಷಣದಿಂದ ಮಾತ್ರ ಏನಾದರೂ ಸಾಧನೆ ಮಾಡಲು ಸಾಧ್ಯವಿದೆ. ಶಿಕ್ಷಣವನ್ನು ಪಡೆದರೆ ಮಾತ್ರ ಜೀವನದಲ್ಲಿ ಮೇಲಕ್ಕೆ ಏರಲು ಸಾಧ್ಯವಿದೆ ಎಂದು ಶ್ರೀ ಶಿವಶರಣೆ ಹೇಮರೆಡ್ಡಿಮಲ್ಲಮ್ಮವೀರಶೈವಲಿಂಗಾಯತ ರೆಡ್ಡಿ ಸಮಾಜದ ರಾಜ್ಯಾಧ್ಯಕ್ಷ ಶೇಖರಗೌಡ ಮಾಲಿ ಪಾಟೀಲ್ ತಿಳಿಸಿದರು.

ನಗರದ ನೀಲಕಂಠೇಶ್ವರ ಸಮುದಾಯ ಭವನದಲ್ಲಿ ನಡೆದ ಶಿವಶರಣೆ ಹೇಮರೆಡ್ಡಿ ಮಲ್ಲಮ್ಮ ಜಯಂತೋತ್ಸವ ಹಾಗೂ ಪ್ರತಿಭಾ ಪುರಸ್ಕಾರ ಸಮಾರಂಭವನ್ನು ಉದ್ಘಾಟಿಸಿ ಮಾತನಾಡಿದರು.

ರಾಜ್ಯದಲ್ಲಿ ನಮ್ಮ ಸಮಾಜದ ಸಂಘಟನೆಗಾಗಿ ಪ್ರವಾಸವನ್ನು ಮಾಡುವುದರ ಮೂಲಕ ಸಂಘಟಿಸಲಾಗುತ್ತಿದೆ, ಇದಕ್ಕೆ ನಮ್ಮ ಸಮಾಜದ ಭಾಂಧವರು ಸಹಾಯ ಮತ್ತು ಸಹಕಾರವನ್ನು ನೀಡಬೇಕಿದೆ, ಈಗಾಗಲೇ 18 ಜಿಲ್ಲೆಗಳಲ್ಲಿ ನಮ್ಮ ಸಮಾಜದ ಸಂಘಟನೆ ಇದೆ ಅಲ್ಲ ನಮ್ಮ ಸಮಾಜ ಬೆಳೆಯುತ್ತಿದೆ. ಚಿತ್ರದುರ್ಗದಲ್ಲಿಯೂ ಸಹಾ ನಮ್ಮ ಸಮಾಜ ಉತ್ತಮವಾದ ಸಂಘಟನೆಯಾಗುತ್ತಿದೆ, ನಮ್ಮ ಸಮಾಜದೊಂದಿಗೆ ಇತರೆ ಸಮಾಜದವರನ್ನು ಸಹಾ ಜೊತೆಯಲ್ಲಿ ಕರೆದ್ಯೊಯಲಾಗುತ್ತಿದೆ, ನಮ್ಮ



ಸಮಾಜದಲ್ಲಿನ ಬಡವರಿಗೆ ಸಹಾಯವನ್ನು ಮಾಡುವ ಮನೋಭಾವವನ್ನು ಬೆಳಸಿಕೊಳ್ಳುವಂತೆ ಕರೆ ನೀಡಿದರು.

ಹೇಮರೆಡ್ಡಿ ಮಲ್ಲಮ್ಮ ಸ್ವಾಧಿಯಾಗಿ ಸಮಾಜವನ್ನು ಮುನ್ನಡೆಸಿದ್ದಾರೆ ಮಲ್ಲಿಕಾರ್ಜನನಲ್ಲಿ ನಮ್ಮ ಸಮಾಜದ ಪರವಾಗಿ ವರವನ್ನು ಪಡೆಯುವುದರ ಮೂಲಕ ದಾರಿ ದೀಪವಾಗಿದ್ದಾರೆ. ತನಗೆ ಕಿರುಕುಳವನ್ನು ನೀಡಿದವರಿಗೂ ಸಹಾ ಒಳ್ಳೆಯದಾಗಲಿ ಎಂದು ಭಗವಂತನಲ್ಲಿ ಕೇಳಿದ ಸಾಧ್ವಿ ಹೇಮರೆಡ್ಡಿ ಮಲ್ಲಮ್ಮ ಎಂದ ಅವರು, ಸಮಾಜದವತಿಯಿಂದ ಈ ರೀತಿಯ ಕಾರ್ಯಕ್ರಮಗಳನ್ನು ಮಾಡುವುದರ ಮೂಲಕ ಸಮಾಜದ ಸಂಘಟನೆಯನ್ನು ಮಾಡಬೇಕಿದೆ. ಶಿಕ್ಷಣದಿಂದ ಮಾತ್ರ ಜೀವನದಲ್ಲಿ ಏನನ್ನಾದರೂ ಸಾಧನೆ ಮಾಡಲು ಸಾಧ್ಯವಿದೆ, ಈ ಹಿನ್ನಲೆಯಲ್ಲಿ ಶಿಕ್ಷಣಕ್ಕೆ ಹೆಚ್ಚಿನ ಮಹತ್ವವನ್ನು ನೀಡಬೇಕಿದೆ, ಕಲಿತರೆ ಮಾತ್ರ ನಮ್ಮ ಬದುಕು ಉತ್ತಮವಾಗಿ ರೂಪುಗೊಳ್ಳಲು ಸಾಧ್ಯವಿದೆ ಎಂದು ತಿಳಿಸಿದರು.

ಶಿವಶರಣೆ ಹೇಮರೆಡ್ಡಿ ಮಲ್ಲಮ್ಮ ವೀರಶೈವ ಲಿಂಗಾಯತ ರೆಡ್ಡಿ ಸಮಾಜದ ಗೌರವಾಧ್ಯಕ್ಷರಾದ ನಾಗೀರೆಡ್ಡಿ ಮಾತನಾಡಿ, ಹಿಂದಿನ ದಿನದಲ್ಲಿ ನಮ್ಮ ಸಮಾಜ ಕಳೆದು ಹೋಗುತ್ತಿತ್ತು ಆದರೆ ಈಗ ಸಮಾಜವನ್ನು ಸಂಘಟಿಸಲಾಗುತ್ತಿದೆ. ನಾವು ಇದುವರೆವಿಗೂ ಬೇರೆಯವರ ಆಶ್ರಯದಲ್ಲಿ ಇದ್ದವೆ ಆದರೆ ಈಗ ನಾವು ಸ್ವತಂತ್ರವಾಗಿ ನಮ್ಮದೇ ಸಮಾಜ ಇದೆ ಎಂದು ತಿಳಿದಿದ್ದು ಅದನ್ನು ಸಂಘಟಿಸಲಾಗುತ್ತಿದೆ ಎಂದರು.

ಮಲ್ಲಮ್ಮ 600 ವರ್ಷಗಳ ಹಿಂದೆಯೇ ನಮ್ಮ ಸಮಾಜವನ್ನು ಸಂಘಟಿಸುವುದರ ಮೂಲಕಒಗ್ಗಟ್ಟನ್ನುಪ್ರದರ್ಶನಮಾಡಿದರು. ಮಲ್ಲಕಾರ್ಜನ ಪರಮ ಭಕ್ತೆಯಾಗಿ ಅತನನ್ನು ಸಾಕ್ಷಾತ್ಕಾರ ಮಾಡಿಸಿಕೊಂಡು ನಮ್ಮ ಸಮಾಜವನ್ನು ಮುನ್ನಡೆಸಿದ್ದಾರೆ. ನಮ್ಮಲ್ಲಿ ಶೈವ ಮತ್ತು ವೈಷ್ಣವ ಪಂಥವನ್ನು ನಾವು ಅನುಸರಿಸುತ್ತೇವೆ, ತಿರುಪತಿ ತಿಮ್ಮಪ್ಪ ನಮ್ಮ ಸಮಾಜದ ಮನದೇವರಾಗಿದ್ದಾರೆ, ಇದ್ದಲ್ಲದೆ ಮಲ್ಲಿಕಾರ್ಜನನ್ನು ಸಹಾ ಆರಾಧನೆ ಮಾಡುತ್ತೇವೆ ನಮ್ಮ ಮಕ್ಕಳಿಗೆ ಸಮಾಜದ ಬಗ್ಗೆ ತಿಳಿಸುವ ಕಾರ್ಯವನ್ನು ಮಾಡಿ ಎಂದರು.

ಶ್ರೀ ಶಿವಶರಣೆ ಹೇಮರೆಡ್ಡಿ ಮಲ್ಲಮ್ಮ ವೀರಶೈವ ಲಿಂಗಾಯತ ರೆಡ್ಡಿ ಸಮಾಜದ ಅಧ್ಯಕ್ಷರಾದ ಚಿದಾನಂದಪ್ಪ ವಹಿಸಿದ್ದರು. ನಿವೃತ್ತ ಶಾಲಾ ತನಿಖಾಧಿಕಾರಿಗಳಾದ ಶಿವಪ್ರಸಾದ್ ಶಿವಶರಣೆ ಹೇಮರೆಡ್ಡಿ ಮಲ್ಲಮ್ಮ ರವರ ಬಗ್ಗೆ ಉಪನ್ಯಾಸ ನೀಡಿದರು. ಇದೇ ಸಂದರ್ಭದಲ್ಲಿ ಎಸ್.ಎಸ್.ಎಲ್.ಸಿ. ಮತ್ತು ಪಿಯುಸಿ ಉತ್ತೀರ್ಣರಾದ ಸಮಾಜದ ಮಕ್ಕಳನ್ನು ಸನ್ಮಾನಿಸಲಾಯಿತು.

ಗೀತಾ, ಜಯಶೀಲ, ರಶ್ಮಿ ಪ್ರಾರ್ಥಿಸಿದರೆ, ಮಲ್ಲಿಕಾರ್ಜನಯ್ಯ ಸ್ವಾಗತಿಸಿದರು, ಶಿವಾನಂದಪ್ಪ ಪ್ರಸ್ತಾವಿಕವಾಗಿ ಮಾತನಾಡಿದರು. ವಿಶ್ವನಾಥ್ ವಂದಿಸಿದರು. ನಾಗರಾಜ್ ಸಂಗಮ್ ಕಾರ್ಯಕ್ರಮ ನಿರೂಪಿಸಿದರು.

## ಫಾಸ್ಟ್ ನ್ಯೂಸ್

### ಮೇ 31 ಕ್ಕೆ ವಿಶ್ವ ತಂಬಾಕು ರಹಿತ ದಿನ ಕಾರ್ಯಕ್ರಮ

» ದಾವಣಗೆರೆ

ಮೇ 31 ರಂದು ಬೆಳಿಗ್ಗೆ 10 ಗಂಟೆಗೆ ನಗರದ ಮಹಾನಗರಪಾಲಿಕೆ ಸಭಾಂಗಣದಲ್ಲಿ 'ವಿಶ್ವ ತಂಬಾಕು ರಹಿತ ದಿನ' ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದೆ.ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಚಿಗಟೇರಿ ಜಿಲ್ಲಾ ಆಸ್ಪತ್ರೆ, ಜಿಲ್ಲಾ ಸರ್ವೇಕ್ಷಣಾಧಿಕಾರಿಗಳ ಕಚೇರಿ, ಜಿಲ್ಲಾ ತಂಬಾಕು ನಿಯಂತ್ರಣ ಕೋಶ, ಜಿಲ್ಲಾ ವಕೀಲರ ಸಂಘ, ಅಶ್ವಿನಿ ಆಯುರ್ವೇದ ಮೆಡಿಕಲ್ ಕಾಲೇಜ್, ಪಿ.ಜಿ.ಸೆಂಟರ್ ಹಾಗೂ ವಿ.ಎಸ್ ಪ್ಯಾರಾಮೆಡಿಕಲ್ ಕಾಲೇಜು ದಾವಣಗೆರೆ ಇವರ ಸಂಯುಕ್ತಾಶ್ರಾಯದಲ್ಲಿ ಆಯೋಜಿಸಲಾಗಿದೆ. ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರದ ಅಧ್ಯಕ್ಷರಾದ ರಾಜೇಶ್ವರಿ. ಎನ್.ಹೆಗಡೆ ಕಾರ್ಯಕ್ರಮ ಉದ್ಘಾಟಿಸುವರು. ಮಹಾನಗರಪಾಲಿಕೆ ಆಯುಕ್ತರಾದ ರೇಣುಕ ಅಧ್ಯಕ್ಷತೆ ವಹಿಸುವರು.ಜಿಲ್ಲಾ ತಂಬಾಕು ನಿಯಂತ್ರಣ ಕೋಶದ ಜಿಲ್ಲಾ ಸರ್ವೇಕ್ಷಣಾಧಿಕಾರಿ ಹಾಗೂ ಕಾರ್ಯಕ್ರಮ ಅಧಿಕಾರಿ ಡಾ.ಜಿ.ಡಿ.ರಾಘವನ್ ಪ್ರಾಸ್ತಾವಿಕ ನುಡಿಗಳಾನ್ನಾಡುವರು. ಹಿರಿಯ ಸಿವಿಲ್ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಮಹಾವೀರ ಎಂ. ಕರೆಣ್ಣವರ ಭಿತ್ತಿ ಪತ್ರ ಉದ್ಘಾಟಿಸುವರು. ಮುಖ್ಯ ಅತಿಥಿಗಳಾಗಿ ಅಪರ ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ತಂಬಾಕು ನಿಯಂತ್ರಣ ಕೋಶದ ನೋಡಲ್ ಅಧಿಕಾರಿ ಸೈಯ್ಯದಾ ಆಫ್ರೀನ್ ಭಾನು ಎಸ್. ಬಳ್ಳಾರಿ, ಜಿಲ್ಲಾ ಆರೋಗ್ಯ ಮತ್ತು ಕು.ಕ. ಅಧಿಕಾರಿ ಹಾಗೂ ಜಿಲ್ಲಾ ತಂಬಾಕು ನಿಯಂತ್ರಣ ಕೋಶದ ಸದಸ್ಯ ಕಾರ್ಯದರ್ಶಿ ಡಾ.ಷಣ್ಮುಖಪ್ಪ. ಎಸ್, ಜಿಲ್ಲಾ ಶಸ್ತ್ರ ಚಿಕಿತ್ಸಕರಾದ ಡಾ.ನಾಗೇಂದ್ರಪ್ಪ, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಹಿರಿಯ ಸಹಾಯಕ ನಿರ್ದೇಶಕರಾದ ಧನಂಜಯಪ್ಪ.ಬಿ, ಜಿಲ್ಲಾ ವಕೀಲರ ಸಂಘದ ಅಧ್ಯಕ್ಷರಾದ ಎಲ್.ಹೆಚ್ ಅರುಣಕುಮಾರ್, ರಾಷ್ಟ್ರೀಯ ಬಾಯಿ ಆರೋಗ್ಯ ಕಾರ್ಯಕ್ರಮದ ಕಾರ್ಯಕ್ರಮಾಧಿಕಾರಿ ಡಾ.ತಿಪ್ಪೇಸ್ವಾಮಿ, ಪಾಲಿಕೆ ಆರೋಗ್ಯಾಧಿಕಾರಿ ಡಾ.ಚಂದ್ರಮೋಹನ್.ಡಿ.ಎಂ, ಅಶ್ವಿನಿ ಆಯುರ್ವೇದ ಮೆಡಿಕಲ್ ಕಾಲೇಜಿನ ಅಧ್ಯಕ್ಷರಾದ ಡಾ.ಮೃತ್ಯುಂಜಯ ಎನ್ ಹಿರೇಮಠ, ಪ್ರಾಚಾರ್ಯರಾದ ಡಾ.ಜ್ಞಾನೇಶ್ವರ್.ಎಲ್. ಎಂ,ವಿ.ಎಸ್.ಪ್ಯಾರಾಮೆಡಿಕಲ್ ಕಾಲೇಜಿನ ಪ್ರಾಚಾರ್ಯರಾದ ಶ್ವೇತಾ ರಘುನಾಥ್ ಭಾಗವಹಿಸುವರು.

### ಡಾ.ಎ.ಪಿ.ಜೆ ಅಬ್ದುಲ್ ಕಲಾಂ ಪದವಿ ಪೂರ್ವ ಕಾಲೇಜಿಗೆ ತಾತ್ಕಾಲಿಕ ಅತಿಥಿ ಉಪನ್ಯಾಸಕ ಹುದ್ದೆಗೆ ಅರ್ಜಿ ಆಹ್ವಾನ

» ದಾವಣಗೆರೆ

ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ ವತಿಯಿಂದ 2024–25 ನೇ ಸಾಲಿಗೆ ಡಾ। ಎ.ಪಿ.ಜೆ ಅಬ್ದುಲ್ ಕಲಾಂ ಪದವಿ ಪೂರ್ವ ವಸತಿ ಕಾಲೇಜು, ಕೊಂಡಜ್ಜಿ ಗ್ರಾಮ ಇಲ್ಲಿ ಪ್ರಥಮ ಮತ್ತು ದ್ವಿತೀಯ ಪಿ.ಯು.ಸಿ ಪಿ.ಸಿ.ಎಂ.ಬಿ ವಿಷಯಗಳಿಗೆ ಆಂಗ್ಲ ಮಾಧ್ಯಮದಲ್ಲಿ ಬೋಧಿಸಲು ತಾತ್ಕಾಲಿಕವಾಗಿ ಅತಿಥಿ ಉಪನ್ಯಾಸಕರನ್ನು ನೇಮಕ ಮಾಡಿಕೊಳ್ಳಲು ಅರ್ಜಿಗಳನ್ನು ಆಹ್ವಾನಿಸಲಾಗಿದೆ. ಇಂಗ್ಲೀಷ್ ಉಪನ್ಯಾಸಕರ ಹುದ್ದೆ ಸಂಖ್ಯೆ–1, ಗಣಿತ ಸಂಖ್ಯೆ–1, ಭೌತಶಾಸ್ತ್ರ ಸಂಖ್ಯೆ–1, ರಸಾಯನ ಶಾಸ್ತ್ರ ಸಂಖ್ಯೆ–1 ಹುದ್ದೆಗೆ ಎಂ.ಎಸ್ಸಿ ಮತ್ತು ಬಿ.ಇಡಿ ವಿದ್ಯಾರ್ಹತೆಯನ್ನು ಹೊಂದಿರಬೇಕು. ಅರ್ಹ ಅಭ್ಯರ್ಥಿಗಳು ಜೂನ್ 5 ರೊಳಗಾಗಿ ವಸತಿ ಕಾಲೇಜಿನಲ್ಲಿ ಅರ್ಜಿ ಸಲ್ಲಿಸಬಹುದು. ಹೆಚ್ಚಿನ ಮಾಹಿತಿಗಾಗಿ ಮೊ.ಸಂ:9008815296, 8970159714 ನ್ನು ಸಂಪರ್ಕಿಸಬಹುದೆಂದು ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ಅಧಿಕಾರಿ ಮಲ್ಲಿಕಾರ್ಜುನ್ ಮಠದ್ ತಿಳಿಸಿದ್ದಾರೆ.

### ಡಿಪ್ಲೋಮಾ ಇನ್ ಕೋ-ಆಪರೇಟಿವ್ ಮ್ಯಾನೇಜ್‌ಮೆಂಟ್ ತರಬೇತಿಗೆ ಅರ್ಜಿ

» ದಾವಣಗೆರೆ

ಕರ್ನಾಟಕ ರಾಜ್ಯ ಸಹಕಾರ ಮಹಾಮಂಡಳವು ರಾಜ್ಯದ ಬೆಂಗಳೂರು, ಮೈಸೂರು, ಮಡಿಕೇರಿ, ಮೂಡಬಿದ್ರೆ, ಶಿವಮೊಗ್ಗ, ಧಾರವಾಡ, ಬೆಳಗಾವಿ ಹಾಗೂ ಕಲಬುರಗಿ ಈ ಸ್ಥಳಗಳಲ್ಲಿ ಕರ್ನಾಟಕ ಇ□□ಸ್ಟಿಟ್ಯೂಟ್ ಆಫ್ ಕೋ–ಆಪರೇಟಿವ್ ಮ್ಯಾನೇ□□ಮೆಂಟ್ ತರಬೇತಿ ಸಂಸ್ಥೆಗಳನ್ನು ನಡೆಸುತ್ತಿದೆ. ಈ ತರಬೇತಿ ಸಂಸ್ಥೆಗಳ ಮೂಲಕ ಸಹಕಾರ ಸಂಘ ಸಂಸ್ಥೆ, ಸಹಕಾರ ಇಲಾಖೆ ,ಸಹಕಾರ ಲೆಕ್ಕಪರಿಶೋಧನಾ ಇಲಾಖೆಯಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಸಿಬ್ಬಂದಿಗಳಿಗೆ ಹಾಗೂ ಖಾಸಗಿ ಅಭ್ಯರ್ಥಿಗಳಿಗೆ 6 ತಿಂಗಳ ಅವಧಿಯ ಡಿಪ್ಲೋಮಾ ಇನ್ ಕೋ–ಆಪರೇಟಿವ್ ಮ್ಯಾನೇಜ್ ಮೆಂಟ್ ತರಬೇತಿಯನ್ನು 2024 ರ ಜುಲೈ ಮಾಹೆಯಲ್ಲಿ ಪ್ರಾರಂಭಿಸಲಾಗುತ್ತಿದ್ದು, ಈ ತರಬೇತಿಯನ್ನು ಪಡೆಯಲಿಚ್ಚಿಸುವ ಅರ್ಹ ಅಭ್ಯರ್ಥಿಗಳಿಂದ ಅರ್ಜಿಗಳನ್ನು ಆಹ್ವಾನಿಸಲಾಗಿದೆ. ಡಿ.ಸಿ.ಎಂ. ತರಬೇತಿಯ ಅರ್ಜಿ ಫಾರಂ ಮತ್ತು ವಿವರಣಾ ಪುಸ್ತಕವನ್ನು ದಾವಣಗೆರೆ ಜಿಲ್ಲಾ ಸಹಕಾರ ಒಕ್ಕೂಟ ನಿಯಮಿತ, #2532, "ಕಲಾಪ್ರಕಾಶ ವೃಂದ", 1ನೇ ಮಹಡಿ, ವಿನೋಬನಗರ 2ನೇ ಮುಖ್ಯರಸ್ತೆ, ಎಂ.ಸಿ.ಸಿ 'ಎ' ಬ್ಲಾಕ್, ದಾವಣಗೆರೆ ಈ ಸಂಸ್ಥೆಯಿಂದ ಪಡೆಯಬಹುದು.

# ಬಿಜೆಪಿ ಸುಳ್ಳು ಹೇಳಿ ಜನರ ದಿಕ್ಕು ತಪ್ಪಿಸುತ್ತಿದೆ

## ಡಾನ್ ಬಾಸ್ಕೋ ಶಾಲೆಯಲ್ಲಿ ಡಿ.ಟಿ.ಶ್ರೀನಿವಾಸ್ ಪರ ಚಂದ್ರಪ್ಪ ಮತಯಾಚನೆ

» ಚಿತ್ರದುರ್ಗ

ಜಾತ್ಯಾತೀತ ತತ್ವದ ಆಧಾರದ ಮೇಲೆ ಆಡಳಿತ ನಡೆಸುವ ಕಾಂಗ್ರೆಸ್ ಪಕ್ಷವನ್ನು ಬೆಂಬಲಿಸುವಂತೆ ಲೋಕಸಭಾ ಕ್ಷೇತ್ರದ ಕಾಂಗ್ರೆಸ್ ಅಭ್ಯರ್ಥಿ, ಮಾಜಿ ಸಂಸದ ಬಿ.ಎನ್.ಚಂದ್ರಪ್ಪ ಹೇಳಿದರು.

ನಗರದ ಡಾನ್ ಬಾಸ್ಕೋ ಶಾಲೆಯಲ್ಲಿ ಬುಧವಾರ ಆಗ್ನೇಯ ಪದವೀಧರ ಶಿಕ್ಷಕರ ಕ್ಷೇತ್ರದ ಕಾಂಗ್ರೆಸ್ ಅಭ್ಯರ್ಥಿ ಡಿ.ಟಿ.ಶ್ರೀನಿವಾಸ್ ಪರ ಮತಯಾಚಿಸಿ ಮಾತನಾಡಿದರು.

ರಾಜ್ಯದಲ್ಲಿ ಕಳೆದೊಂದು ವರ್ಷದಿಂದ ಆಡಳಿತ ನಡೆಸುತ್ತಿರುವ ಮುಖ್ಯಮಂತ್ರಿ ಸಿದ್ಧರಾಮಯ್ಯ ನೇತೃತ್ವದ ಕಾಂಗ್ರೆಸ್ ಸರ್ಕಾರ ನುಡಿದಂತೆ ನಡೆಯುತ್ತಿದೆ. ದೀನ ದಲಿತರು, ಬಡವರು, ಅಲ್ಪಸಂಖ್ಯಾತರು ಸೇರಿದಂತೆ ಸರ್ವಜನಾಂಗದ ಹಿತ ಕಾಯುವ ಐದು ಗ್ಯಾರಂಟಿ ಕಾರ್ಯಕ್ರಮಗಳನ್ನು ಜಾರಿಗೊಳಿಸಿದ್ದಾರೆ. ಇದರಿಂದ ಅವರು ಸ್ವಾವಲಂಬನೆ ಸಾಧಿಸಲು ಅನುಕೂಲವಾಗಿದೆ ಎಂದರು.

ಬಿಜೆಪಿಯವರು ಪದೇ ಪದೇ ಸುಳ್ಳು ಹೇಳಿ ಜನರನ್ನು ದಿಕ್ಕು ತಪ್ಪಿಸುತ್ತಿದ್ದಾರೆ. ಇಂಥವರ ಕೈಯಲ್ಲಿ ಅಧಿಕಾರ ನೀಡಿದರೆ ರಾಜ್ಯವನ್ನೇ ಲೂಟಿ ಮಾಡುತ್ತಾರೆ. ಎಂಬುದನ್ನು ಮನಗಂಡ ಕಳೆದ ವಿಧಾನಸಭಾ ಚುನಾವಣೆಯಲ್ಲಿ ರಾಜ್ಯದ ಪ್ರಜ್ಞಾವಂತ ಮತದಾರರು ಬಿಜೆಪಿಗೆ ತಕ್ಕಪಾಠ ಕಲಿಸಿ ಕಾಂಗ್ರೆಸ್ ಸರ್ಕಾರ ಆಡಳಿತ ನಡೆಸಲು ಸ್ಪಷ್ಟ ಬಹುಮತ ನೀಡಿದರು. ಇದರಿಂದ ಜನಸಾಮಾನ್ಯರ ಕಷ್ಟಗಳನ್ನು ಪರಿಹರಿಸಲು ಪಣತೊಟ್ಟಿರುವ ಕಾಂಗ್ರೆಸ್ ಪಕ್ಷ ಶಿಕ್ಷಕರ ಸಮಸ್ಯೆಗಳನ್ನು ಪರಿಹರಿಸಲು ಬದ್ಧವಾಗಿದೆ. ಹೀಗಾಗಿ ಕಾಂಗ್ರೆಸ್ ಪಕ್ಷದ ಅಭ್ಯರ್ಥಿ



ಡಿ.ಟಿ.ಶ್ರೀನಿವಾಸ್ ಅವರನ್ನು ಮೊದಲ ಪ್ರಾಶಸ್ತ್ಯದ ಮತಗಳಿಂದ ಜಯಗಳಿಸಿದರೆ ಸರ್ಕಾರದ ಭಾಗವಾಗಿ ನಿಮ್ಮಗಳ ಸೇವೆ ಮಾಡಲು ಅನುಕೂಲವಾಗಲಿದೆ ಎಂದರು.

ಜಾತಿ ಬೇಧ, ತಾರತಮ್ಯ ತಂದು ಸಮಾಜವನ್ನು ಹೊಡೆದಾಳುವ ನೀತಿ ಬಿಜೆಪಿಯವರು ಅನುಸರಿಸುತ್ತಿದ್ದಾರೆ. ರಾಜ್ಯದಲ್ಲಿ, ದೇಶದಲ್ಲಿ ಹಿಂದೂ, ಮುಸ್ಲಿಂ ಒಂದೇ ಎಂಬ ತತ್ವ, ಸಿದ್ಧಾಂತ, ಸಂವಿಧಾನ ಸಂರಕ್ಷಣೆಯೊಂದಿಗೆ ಆಡಳಿತ ನಡೆಸುವ ಪಕ್ಷ ಎಂದರೆ ಕಾಂಗ್ರೆಸ್ಮಾತ್ರ. ಸ್ವಾತಂತ್ರ್ಯ ನಂತರ ಸುಭದ್ರ ರಾಷ್ಟ್ರ ನಿರ್ಮಾಣಕ್ಕೆ ಶ್ರಮಿಸಿರುವ ಕಾಂಗ್ರೆಸ್, ಆರೂವರೆ ದಶಕಗಳ ಕಾಲ ಜನಪರ ಯೋಜನೆಗಳನ್ನು ಜಾರಿಗೊಳಿಸಿದೆ. ಆದರೆ ಹತ್ತು ವರ್ಷಗಳಿಂದ ಅಧಿಕಾರ ನಡೆಸುತ್ತಿರುವ ಬಿಜೆಪಿ ಕೇವಲ ಬಂಡವಾಳಶಾಯಿಗಳ ಹಿತ ಕಾಯುತ್ತಿದೆ. ಜನಸಾಮಾನ್ಯರ ಕಲ್ಯಾಣಕ್ಕೆ ಒಂದಾದರೂ ಕಲ್ಯಾಣ ಕಾರ್ಯಕ್ರಮಗಳನ್ನು ರೂಪಿಸಿದ್ದಾರೆಯೇ ಎಂದು ಪ್ರಶ್ನಿಸಿದರಲ್ಲದೇ ಈ ಬಾರಿ ಕೇಂದ್ರದಲ್ಲಿ ಇಂಡಿಯಾ ಮೈತ್ರಿಕೂಟ ಅಧಿಕಾರ ಚುಕ್ಕಾಣಿ ಹಿಡಿಯುವುದರಲ್ಲಿ ಯಾವುದೇ ಸಂಶಯವಿಲ್ಲ ಎಂದರು.

ಮಾಜಿ ಶಾಸಕಿ ಪೂರ್ಣಿಮಾ ಶ್ರೀನಿವಾಸ್, ಈ ಸಂದಭದಲ್ಲಿ ಜಿಲ್ಲಾ ಕಾಂಗ್ರೆಸ್ ಅಧ್ಯಕ್ಷ ಎಂ.ಕೆ. ತಾಜ್ ಪೀರ್, ಮಾಜಿ ಅಧ್ಯಕ್ಷ ಪಾತ್ಯರಾಜನ್, ಜಿಪಂ ಕೆಡಿಪಿ ಸದಸ್ಯ ಕೆ.ಸಿ.ನಾಗರಾಜ್, ಜಿಲ್ಲಾ ಪ್ರಧಾನ ಕಾರ್ಯದರ್ಶಿ ಡಿ.ಎನ್.ಮೈಲಾರಪ್ಪ, ಗ್ರಾಮಾಂತರ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಪ್ರಕಾಶ್ ಮುಖಂಡರಾದ ಎನ್.ಡಿ.ಕುಮಾರ್, ವೆಂಕಟೇಶ ಮತ್ತಿತರರು ಇದ್ದರು.

# ಯೂತ್ ಕಾಂಗ್ರೆಸ್‌ನಿಂದ ಡಿ.ಟಿ.ಶ್ರೀನಿವಾಸ್ ಪರ ಮತಯಾಚನೆ

» ಚಿತ್ರದುರ್ಗ

ಆಗ್ನೇಯಶಿಕ್ಷಕರಕ್ಷೇತ್ರಕ್ಕೆಮುಂದಿನ ತಿಂಗಳು 3 ರಂದು ನಡೆಯುವ ಚುನಾವಣೆಯಲ್ಲಿ ಕಾಂಗ್ರೆಸ್ ಅಭ್ಯರ್ಥಿಯಾಗಿ ಸ್ಪರ್ಧಿಸಿರುವ ಡಿ.ಟಿ.ಶ್ರೀನಿವಾಸ್‌ರವರ ಪರ ಜಿಲ್ಲಾ ಯೂತ್ ಕಾಂಗ್ರೆಸ್ ಅಧ್ಯಕ್ಷ ಕಾರೇಹಳ್ಳಿ ಉಲ್ಲಾಸ್ ಬುಧವಾರ ಅನೇಕ ಶಾಲಾ–ಕಾಲೇಜುಗಳಿಗೆ ಭೇಟಿ ನೀಡಿ ಮತ ಯಾಚಿಸಿದರು.

ಜೋಗಿಮಟ್ಟಿ ರಸ್ತೆಯಲ್ಲಿರುವ ವಾಸುದೇವ ಪ್ರೌಢಶಾಲೆ, ಎಂ.ಎಂ.ಪ್ರೌಢಶಾಲೆ,

ಪಿ.ವಿ.ಎಸ್. ಬಿ.ಇ.ಡಿ. ಕಾಲೇಜು ಹಾಗೂ ಎಸ್. ಜೆ.ಎಂ.ಕಾನೂನು ಕಾಲೇಜಿನಲ್ಲಿ ಅಭ್ಯರ್ಥಿ ಡಿ.ಟಿ.ಶ್ರೀನಿವಾಸ್ ಪರ ಮತಯಾಚಿಸಿದ ಯೂತ್ ಕಾಂಗ್ರೆಸ್ ಜಿಲ್ಲಾಧ್ಯಕ್ಷ ಕಾರೆಹಳ್ಳಿ ಉಲ್ಲಾಸ್ ಮೊದಲಿನಿಂದಲೂ ಕಾಂಗ್ರೆಸ್ ಪಕ್ಷ ಶಿಕ್ಷಕರುಗಳ ಪರವಾಗಿದೆ.

ವಿಧಾನಸಭೆ ಚುನಾವಣೆ ಪೂರ್ವದಲ್ಲಿ ಘೋಷಿಸಿದ ಐದು ಗ್ಯಾರೆಂಟಿಗಳನ್ನು ಈಡೇರಿಸಿದೆ. ನುಡಿದಂತೆ ನಡೆಯುವ ಪಕ್ಷ ಕಾಂಗ್ರೆಸ್ ಶಿಕ್ಷಕರುಗಳ ಅನೇಕ ಸಮಸ್ಯೆಗಳನ್ನು ಮುಂದಿನ ದಿನಗಳಲ್ಲಿ ನಿವಾರಿಸಲಿದೆ. ಅದಕ್ಕಾಗಿ ಆಗ್ನೇಯ ಶಿಕ್ಷಕರ ಕ್ಷೇತ್ರದ ಅಭ್ಯರ್ಥಿ ಡಿ.ಟಿ.ಶ್ರೀನಿವಾಸ್‌ರವರಿಗೆ ಮೊದಲ ಪ್ರಾಶಸ್ತ್ಯದ ಮತ ನೀಡಿ ಗೆಲ್ಲಿಸಿ ವಿಧಾನಪರಿಷತ್‌ಗೆ ಕಳಿಸಿಕೊಡುವಂತೆ ಶಿಕ್ಷಕರುಗಳಲ್ಲಿ ಮನವಿ ಮಾಡಿದರು. ಮೀನುಗಾರಿಕೆ ವಿಭಾಗದ ಅಧ್ಯಕ್ಷ ಶಶಿಕಿರಣ್ ಮೊಗವೀರ್, ವಾಸುದೇವ ಶಾಲೆ ಆಡಳಿತ ಮಂಡಳಿಯ ಶಫಿವುಲ್ಲಾ ಈ ಸಂದರ್ಭದಲ್ಲಿದ್ದರು.

# ಕಾಂಗ್ರೆಸ್ ಸರ್ಕಾರದ ಆಡಳಿತದಲ್ಲಿ ಶಿಕ್ಷಣ ಇಲಾಖೆ ಅಭಿವೃದ್ಧಿಗೆ ಹಿನ್ನಡೆ: ಮಾಜಿ ಶಾಸಕ ತಿಪ್ಪೇಸ್ವಾಮಿ

» ಮೊದಲ ಪುಟದಿಂದ

ನಿಗಟಪೂರ್ವ ಮಂಡಲಾಧ್ಯಕ್ಷ ಈ.ರಾಮರೆಡ್ಡಿ ಮಾತನಾಡಿ, ಕಳೆದ ಹಲವಾರು ವರ್ಷಗಳಿಂದ ಈ ಕ್ಷೇತ್ರದಲ್ಲಿ ಬಿಜೆಪಿ ಅಭ್ಯರ್ಥಿಯೇ ನಿರಂತರವಾಗಿ ಆಯ್ಕೆಯಾಗುತ್ತಾ ಬಂದಿದ್ದಾರೆ. ವೈ.ಎ.ನಾರಾಯಣಸ್ವಾಮಿ ನಾಲ್ಕನೇ ಬಾರಿಗೆ ಸ್ಪರ್ಧೆ ಮಾಡಿದ್ದಾರೆ. ಯಾವುದೇ ಶಿಕ್ಷಕರು, ಯಾವುದೇ ಸಮಯದಲ್ಲಿ ಹೋದರೂ ಅವರ ಸಮಸ್ಯೆ ಅರಿತು ಶಿಕ್ಷಣ ಇಲಾಖೆಯ ಹಿರಿಯ ಅಧಿಕಾರಿಗಳು ಹಾಗೂ ಸಚಿವರನ್ನು ಭೇಟಿ ಮಾಡಿಸಿ ಶಿಕ್ಷಕರ ಸಮಸ್ಯೆಗಳನ್ನು ನಿವಾರಣೆ ಮಾಡುತ್ತಾರೆ. ಇಂತಹ ಅನುಭವಿ ವಿಧಾನಪರಿಷತ್ ಸದಸ್ಯರು ಶಿಕ್ಷಣ ಕ್ಷೇತ್ರದಲ್ಲಿ ಇರುವುದು ಶಿಕ್ಷಕರ ಸೌಭಾಗ್ಯ ಎಂದು ನನ್ನ ಭಾವನೆ ಎಂದರು. ಬಿಜೆಪಿ ಹಿರಿಯ ಮುಖಂಡ ಎಂವೈಟಿ ಸ್ವಾಮಿ, ಪ್ರಧಾನ ಕಾರ್ಯದರ್ಶಿ ಬೆಂಕಿಗೋವಿಂದಪ್ಪ, ಡಿ.ಎಚ್.ಪರಮೇಶ್ವರಪ್ಪ, ರುದ್ರಮುನಿ, ಕೆ.ಎಂ.ಶಿವಸ್ವಾಮಿ, ಡಿ.ಎಸ್.ಪಾಲಯ್ಯ ಶ್ರೀನಿವಾಸ್ ಮುಂತಾದವರು ಉಪಸ್ಥಿತರಿದ್ದರು.

## ವಿದ್ಯುತ್ ವ್ಯತ್ಯಯ

**ದಾವಣಗೆರೆ:** ದಾವಣಗೆರೆಯಿಂದ ಹೊರಡುವ 66/11 ಕೆ.ವಿ.ವಿ.ವಿ. ಫೀಡ□□ಗಳಲ್ಲಿ ಮಹಾನಗರ ಪಾಲಿಕೆ ವತಿಯಿಂದ ಡ್ರೇನೆಜ್ ಕಾಮಗಾರಿಯನ್ನು ಹಮ್ಮಿಕೊಂಡಿರುವುದರಿಂದ ಮೇ.30 ರಂದು ಬೆಳಿಗ್ಗೆ 10 ರಿಂದ ಮಧ್ಯಾಹ್ನ 3 ಗಂಟೆಯವರೆಗೆ ವಿದ್ಯುತ್ ವ್ಯತ್ಯಯವಾಗಲಿದೆ. ಮೌನೇಶ್ವರ ಫೀಡರ್ ವ್ಯಾಪ್ತಿಯ ಹೆಚ್.ಕೆ.ಆರ್. ಸರ್ಕಲ್, ಕೆ.ಇ.ಬಿ ಕಾಲೋನಿ, ನಿಟುವಳ್ಳಿ ಹೊಸಬಡಾವಣೆ, ಮೌನೇಶ್ವರಬಡಾವಣೆ, ಹಾಗೂ ಇ.ಎಸ್.ಐ .ಆಸ್ಪತ್ರೆಕೆ.ಟಿ.ಜೆ ನಗರ ಪೋಲೀಸ್ ಠಾಣೆ ಮತ್ತು ಸುತ್ತ ಮುತ್ತಲಿನ ಪ್ರದೇಶಗಳು ಜಯನಗರ ಫೀಡರ್ ವ್ಯಾಪ್ತಿಯ ನಿಟುವಳ್ಳಿ ಹಾಗು ನಿಟುವಳ್ಳಿ ಹೊಸಬಡಾವಣೆ, ದುರ್ಗಾಂಬಿಕದೇವಸ್ಥಾನ ಸುತ್ತಮುತ್ತ, 60 ಅಡಿ ರಸ್ತೆ ಮತ್ತು ಸುತ್ತ ಮುತ್ತಲಿನ ಪ್ರದೇಶಗಳಲ್ಲಿ ವಿದ್ಯುತ್ ವ್ಯತ್ಯಯವಾಗಲಿದೆ ಎಂದು ಬೆಸ್ಕಾಂ ಪ್ರಕಟಣೆ ತಿಳಿಸಿದೆ.

## ವ್ಯಕ್ತಿ ಕಾಣೆ

**ಚಿತ್ರದುರ್ಗ:** ಚಿತ್ರದುರ್ಗ ತಾಲ್ಲೂಕಿನ ದೊಡ್ಡಿಗನಾಳ್ ಗ್ರಾಮದ ಯುವರಾಜ್ ತಂದೆ ಕುಮಾರ್ (ಸು.25 ವರ್ಷ) ಎಂಬ ವ್ಯಕ್ತಿ ಕಾಣೆಯಾದ ಕುರಿತು 2024ರ ಮೇ.19 ರಂದು ಚಿತ್ರದುರ್ಗ ಗ್ರಾಮಾಂತರ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ. ಕನ್ನಡ ಭಾಷೆ ಮಾತನಾಡುತ್ತಾನೆ. ಈ ಮೇಲ್ಕಂಡ ವ್ಯಕ್ತಿಯ ಬಗ್ಗೆ ಮಾಹಿತಿ ತಿಳಿದು ಬಂದಲ್ಲಿ ಚಿತ್ರದುರ್ಗ ಗ್ರಾಮಾಂತರ ಪೊಲೀಸ್ ಠಾಣೆಗೆ ಸಂಪರ್ಕಿಸಬಹುದು.

## ಪ್ರಮುಖ ಸುದ್ದಿ

### ವಿದ್ಯಾರ್ಥಿಗಳಿಗೆ ಗುಣಮಟ್ಟದ ಶಿಕ್ಷಣ ನೀಡಿ ಭವಿಷ್ಯವನ್ನು ಉಜ್ವಲಗೊಳಿಸುವ ಸಂಕಲ್ಪ: ಕೆ.ಎಸ್.ಸುರೇಶ್

# ಹೊಸಶೈಕ್ಷಣ ಯುಗ ಆರಂಭಿಸಲು ಇಲಾಖೆ ಸರ್ವ ಸಿದ್ಧತೆ

» ಚಳ್ಳಕೆರೆ

ತಾಲ್ಲೂಕಿನಾದ್ಯಂತ 2024–25ನೇ ಸಾಲಿನ ಹೊಸಶೈಕ್ಷಣಿಕ ಯುಗ ಆರಂಭವಾಗಲಿದ್ದು, ಎಲ್ಲಾ ಸರ್ಕಾರಿ ಶಾಲೆಗಳಲ್ಲಿ ವಿದ್ಯಾರ್ಥಿಗಳಿಗೆ ಗುಣಮಟ್ಟದ ಶಿಕ್ಷಣವನ್ನು ನೀಡಿ ಅವರ ಭವಿಷ್ಯವನ್ನು ಉತ್ತಮಪಡಿಸುವ ಸಂಕಲ್ಪದೊಂದಿಗೆ ಶಾಲೆಗಳು ಆರಂಭವಾಗಲಿದ್ದು, ಈಗಾ ಗಳೇ ಎಲ್ಲಾ ಶಾಲೆಗಳ ಮೂಲಭೂತ ಸೌಕರ್ಯವೂ ಸೇರಿದಂತೆ ಎಲ್ಲಾ ವ್ಯವಸ್ಥೆಯನ್ನು ಕೈಗೊಳ್ಳಲಾಗಿದೆ ಎಂದು ಕ್ಷೇತ್ರ ಶಿಕ್ಷಣಾಧಿಕಾರಿ ಕೆ.ಎಸ್.ಸುರೇಶ್ ತಿಳಿಸಿದರು. ಅವರು, ಪತ್ರಿಕೆಯೊಂದಿಗೆ ಮಾತನಾಡಿ, ಪ್ರಸ್ತುತ ಶೈಕ್ಷಣಿಕ ವರ್ಷದ ಶಾಲೆಗಳ ಆರಂಭಕ್ಕೆ ಕ್ಷಣಗಣನೆ ಆರಂಭವಾಗಿ, ಈಗಾಗಲೇ ತಾಲ್ಲೂಕಿನ ಎಲ್ಲಾ ಸರ್ಕಾರಿ ಶಾಲೆಗಳು ಹಾಗೂ ಅನುದಾನಿತ ಶಾಲೆಗಳ ಕಟ್ಟಡ, ಮೈದಾನವೂ ಸೇರಿದಂತೆ ಎಲ್ಲವನ್ನೂ ಸ್ವಚ್ಛಗೊಳಿಸಲಾಗಿದೆ. ವಿಶೇಷವಾಗಿ ಕಟ್ಟಡಗಳಿಗೆ ಹೊಸದಾಗಿ ಸುಣ್ಣಬಣ್ಣ ಹೊಡೆಸಿದ್ದು, ಎಲ್ಲವೂ ನವೀನರೀತಿಯಲ್ಲಿ



ಕಂಗೋಳಿಸುತ್ತಿವೆ. ಈಗಾಗಲೇ ಶಿಕ್ಷಕರ ಸಮೂಹ ವಿದ್ಯಾರ್ಥಿಗಳನ್ನು ಸ್ವಾಗತಿಸಲು ಶಾಲೆಗಳಿಗೆ ತಳಿರುತೋರಣ, ರಂಗೋಲಿ, ಬಣ್ಣ, ಬಣ್ಣದ ಚಿತ್ತಾರ ಬಿಡಿಸಿ ಸಿದ್ಧಪಡಿಸಿದ್ದಾರೆ. ವಿಶೇಷವಾಗಿ ಮಕ್ಕಳಿಗೆ ಶಿಕ್ಷಕರೇ ಪ್ರವೇಶದ್ವಾರದಲ್ಲಿ ನಿಂತು ಹೂ, ಸಿಹಿ ನೀಡಿ ಸ್ವಾಗತಿಸುವ ಕಾರ್ಯವನ್ನು ಶಿಕ್ಷಣ ಇಲಾಖೆ ಈಗಾಗಲೇ ರೂಪಿಸಿದೆ. ಪ್ರಸ್ತುತ ವರ್ಷದ ಶೈಕ್ಷಣಿಕ ಆರಂಭವನ್ನು ಯಶಸ್ವಿಗೊಳಿಸಲು ಇಡೀ ಶಿಕ್ಷಣ ಇಲಾಖೆ ಹೊಸ ಉತ್ಸಾಹದಿಂದ ಕಾರ್ಯನಿರ್ವಹಿಸುತ್ತಿದೆ ಎಂದರು.

ಪ್ರಸ್ತುತ ತಾಲ್ಲೂಕಿನಾದ್ಯಂತ ಒಂದರಿಂದಹತ್ತನೇ ತರವತಿಯ 360 ಸರ್ಕಾರಿ ಶಾಲೆಗಳು, 46 ಅನುದಾನಿತ ಪ್ರೌಢಶಾಲೆ, ಪ್ರಾಥಮಿಕ 17 ಶಾಲೆಗಳಿವೆ, 52282 ವಿದ್ಯಾರ್ಥಿಗಳಿದ್ದು ಈಗಾಗಲೇ ವಿದ್ಯಾರ್ಥಿಗಳಿಗೆ ಎರಡು ಜೊತೆ ಹೊಸ ಸಮವಸ್ತ್ರ ಹಾಗೂ ಪಠ್ಯಪುಸ್ತಕಗಳನ್ನು ವಿತರಣೆ ಮಾಡಲಾಗಿದೆ. ಪ್ರತ್ಯೇಕವಾಗಿ 7 ವಸತಿ ಶಾಲೆಗಳಿದ್ದು ಅವುಗಳಿಗೂ ಸಮವಸ್ತ್ರ ಹಾಗೂ ಪಠ್ಯಪುಸ್ತಕಗಳನ್ನು ವಿತರಣೆ ಮಾಡಲಾಗುವುದು ಎಂದರು. ಈಗಾಗಲೇ ತಾಲ್ಲೂಕಿನಾದ್ಯಂತ ಶೇ.85ರಷ್ಟು ವಿದ್ಯಾರ್ಥಿಗಳಿಗೆ ಉಚಿತವಾಗಿ ಪಠ್ಯಪುಸ್ತಕ, ಸಮವಸ್ತ್ರ ವಿತರಣೆ ಮಾಡಲಾಗಿದೆ. ಶಿಕ್ಷಣ ಇಲಾಖೆಯ ಎಲ್ಲಾ ಅಧಿಕಾರಿಗಳು ಹಾಗೂ ಎಲ್ಲಾ ಶಾಲೆಗಳ ಮುಖ್ಯ, ಸಹ ಶಿಕ್ಷಕರು ಹಾಗೂ ಸಿಬ್ಬಂದಿ ವರ್ಗ 2024–25ರ ಶೈಕ್ಷಣಿಕ ವರ್ಷವನ್ನು ಅದ್ದೂರಿಯಾಗಿ ಸ್ವಾಗತಿಸಲು ಎಲ್ಲಾ ರೀತಿಯ ಪೂರ್ವತಯಾರಿಯನ್ನು ಮಾಡಿಕೊಂಡಿದ್ದಾರೆ ಎಂದರು.

## ಫಾಸ್ಟ್ ನ್ಯೂಸ್

### ವಕ್ಫ್ ಮಂಡಳಿಯ ಮಾದರಿ ನಿಯಮಾವಳಿ ನಮೂನೆ-42 ಅಂಗೀಕಾರ ಕಡ್ಡಾಯ

» **ಚಿತ್ರದುರ್ಗ**

ರಾಜ್ಯ ವಕ್ಫ್ ಮಂಡಳಿಯಲ್ಲಿ ನೊಂದಣಿಯಾದ ಜಿಲ್ಲೆಯ ಎಲ್ಲಾ ವಕ್ಫ್ ಸಂಸ್ಥೆಗಳು ಕರ್ನಾಟಕ ರಾಜ್ಯ ಉಚ್ಚ ನ್ಯಾಯಾಲಯ, ಧಾರವಾಡ ಪೀಠವು 2024ರ ಫೆ.23 ರಂದು ನೀಡಿರುವ ಆದೇಶದಂತೆ ರಾಜ್ಯ ವಕ್ಫ್ ಮಂಡಳಿಯ ಮಾದರಿ ನಿಯಮಾವಳಿಯ ನಮೂನೆ-42 (ಬೈಲಾವನ್ನು) ಅಂಗೀಕರಿಸಿಕೊಳ್ಳುವುದು ಕಡ್ಡಾಯವಾಗಿದೆ.ಆದ್ದರಿಂದ ಈವರೆಗೂ ಮಾದರಿ ನಿಯಮಾವಳಿಯನ್ನು ಪಾಲಿಸದ ವಕ್ಫ್ ಸಂಸ್ಥೆಗಳು ಮಾದರಿ ನಿಯಮಾವಳಿಯ ನಮೂನೆ-42 ನ್ನು ಸಂಬಂಧಪಟ್ಟ ದಾಖಲೆಗಳೊಂದಿಗೆ ಚಿತ್ರದುರ್ಗ ಜಿಲ್ಲಾ ವಕ್ಫ್ ಕಚೇರಿಯ ಮೂಲಕ ಕರ್ನಾಟಕ ರಾಜ್ಯ ವಕ್ಫ್ ಮಂಡಳಿಯ ಅಂಗೀಕಾರಕ್ಕಾಗಿ ಶೀಘ್ರವಾಗಿ ಪ್ರಸ್ತಾವನೆಯನ್ನು ಸಲ್ಲಿಸಬೇಕು ಎಂದು ಜಿಲ್ಲಾ ವಕ್ಫ್ ಅಧಿಕಾರಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಡಿಪ್ಲೋಮಾ ಪ್ರವೇಶಾತಿಗೆ ಅರ್ಜಿ ಆಹ್ವಾನ

» **ಚಿತ್ರದುರ್ಗ**

2024-25 ನೇ ಪ್ರಸಕ್ತ ಸಾಲಿಗೆ ಸರ್ಕಾರಿ ಪಾಲಿಟೆಕ್ನಿಕ್ ಹಿರಿಯೂರಿನ ಸಂಸ್ಥೆಯಲ್ಲಿ ಪ್ರಥಮ ವರ್ಷದ ಡಿಪ್ಲೋಮಾ ಸೀಟುಗಳಿಗೆ ಆನ್‌ಲೈನ್ ಮುಖಾಂತರ ಹಂಚಿಕೆಯಾಗದೆ ಉಳಿದ ಸೀಟುಗಳಿಗೆ ಮೆರಿಟ್ ರೋಷ್ಟರ್ ಆಧಾರಿತ ಆಫ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ. ಪ್ರವೇಶಾತಿಗೆ ಸಲ್ಲಿಸಬೇಕಾದ ದಾಖಲೆಗಳು: ಪ್ರವೇಶಾತಿ ಬಯಸುವ ಅರ್ಹ ವಿದ್ಯಾರ್ಥಿಗಳು ಮೂಲ ಎಸ್.ಎಸ್.ಎಲ್.ಸಿ ಅಂಕಪಟ್ಟಿ, ಮೂಲ ವರ್ಗಾವಣೆ ಪತ್ರ, ಜಾತಿ ಮತ್ತು ಆದಾಯ ಪ್ರಮಾಣ ಪತ್ರ, ಕನ್ನಡ ಮಾಧ್ಯಮ ಹಾಗೂ ಗ್ರಾಮೀಣ ಮಾಧ್ಯಮ ಪ್ರಮಾಣ ಪತ್ರ ಮತ್ತು ವ್ಯಾಸಾಂಗ ದೃಢೀಕರಣ ಪತ್ರದೊಂದಿಗೆ ಆಫ್‌ಲೈನ್ ಮೂಲಕ ಅರ್ಜಿ ಸಲ್ಲಿಸಿ ಈ ಸುವರ್ಣವಕಾಶವನ್ನು ಸದುಪಯೋಗ ಪಡೆದುಕೊಳ್ಳಬಹುದು. ಅರ್ಜಿ ಸಲ್ಲಿಕೆ ಪ್ರಕ್ರಿಯೆ ಇದೇ ಮೇ.30 ರಿಂದ ಪ್ರಾರಂಭವಾಗಲಿದ್ದು, ಜೂನ್ 4 ಅರ್ಜಿ ಸಲ್ಲಿಸಲು ಕೊನೆಯ ದಿನವಾಗಿದೆ. ಜೂನ್ 05ರಂದು ಮೆರಿಟ್ ಪಟ್ಟಿ ಬಿಡುಗಡೆ ಮಾಡಲಾಗುವುದು. ಹೆಚ್ಚಿನ ಮಾಹಿತಿಗಾಗಿ ಸಂಸ್ಥೆಯ ಕಚೇರಿಯ ದೂರವಾಣಿ ಸಂಖ್ಯೆ 9900337587, 9482787542 ಗೆ ಸಂಪರ್ಕಿಸಬಹುದು ಎಂದು ಪ್ರಕಟಣೆ ತಿಳಿಸಿದೆ.

### ಮೇ.30 ರಂದು ವಿಶ್ವ ಸ್ಕಿಜೋಫ್ರೇನಿಯಾ ದಿನಾಚರಣೆ-2024

» **ಚಿತ್ರದುರ್ಗ**

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಜಿಲ್ಲಾ ಮಾನಸಿಕ ಆರೋಗ್ಯ ಕಾರ್ಯಕ್ರಮ ವಿಭಾಗ, ತಾಲ್ಲೂಕು ಅಧಿಕಾರಿಗಳ ಕಚೇರಿ ಹಾಗೂ ಸದ್ಗುರು ಶ್ರೀ ಕಬೀರನಂದಾ ವಿದ್ಯಾಸಂಸ್ಥೆ ಸಂಯುಕ್ತಾಶ್ರಯದಲ್ಲಿ ಮೇ. 30ರಂದು ಬೆಳಿಗ್ಗೆ 11 ಗಂಟೆಗೆ ನಗರದ ಸದ್ಗುರು ಶ್ರೀ ಕಬೀರಾನಂದಾ ವಿದ್ಯಾಸಂಸ್ಥೆಯಲ್ಲಿ ವಿಶ್ವ ಸ್ಕಿಜೋಫ್ರೇನಿಯಾ ದಿನಾಚರಣೆ-2024 ಕಾರ್ಯಕ್ರಮ ಆಯೋಜಿಸಲಾಗಿದೆ. ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ.ರೇಣುಪ್ರಸಾದ್ ಕಾರ್ಯಕ್ರಮವನ್ನು ಉದ್ಘಾಟಿಸುವರು. ಶ್ರೀ ಕಬೀರನಂದಾ ವಿದ್ಯಾಸಂಸ್ಥೆಯ ಅಧ್ಯಕ್ಷ ಜದ್ಗುರು ಶ್ರೀ ಶಿವಲಿಂಗಾನಂದಾ ಮಹಾಸ್ವಾಮೀಜಿ ಅಧ್ಯಕ್ಷತೆ ವಹಿಸುವರು. ಮುಖ್ಯ ಅತಿಥಿಗಳಾಗಿ ಜಿಲ್ಲಾ ಆರ್.ಸಿ.ಹೆಚ್.ಅಧಿಕಾರಿ ಡಿ.ಎಂ.ಅಭಿನವ್, ಜಿಲ್ಲಾ ಮಾನಸಿಕ ಆರೋಗ್ಯ ಕಾರ್ಯಕ್ರಮ ಅನುಷ್ಠಾನಾಧಿಕಾರಿ ಜಿ.ಓ.ನಾಗರಾಜ್, ತಾಲ್ಲೂಕು ಆರೋಗ್ಯಾಧಿಕಾರಿ ಬಿ.ವಿ.ಗಿರೀಶ್, ಜಿಲ್ಲಾ ಪರಿಶಿಷ್ಟ ವರ್ಗಗಳ ಕಲ್ಯಾಣಾಧಿಕಾರಿ ಓ.ಪರಮೇಶ್ವರಪ್ಪ, ಕ್ಷೇತ್ರ ಶಿಕ್ಷಣಾಧಿಕಾರಿ ಎಸ್.ನಾಗಭೂಷಣ್, ಕಬೀರನಂದಾ ಡಿ.ಪಿ.ಇ.ಡಿ ಕಾಲೇಜು ಪ್ರಾಂಶುಪಾಲ ಸಿ.ಎಲ್.ನಿರಂಜನಮೂರ್ತಿ, ಟಿ.ಗಿರೀಶ್ ಹಾಗೂ ಕಬೀರನಂದಾ ನರ್ಸಿಂಗ್ ಕಾಲೇಜ್ ಪ್ರಾಂಶುಪಾಲೆ ಎಸ್.ವಿಶಾಲ ಭಾಗವಹಿಸಲಿದ್ದಾರೆ. ಸಿ.ಜಿ ಹಳ್ಳಿ ಪ್ರಾಥಮಿಕ ಆರೋಗ್ಯ ಕೇಂದ್ರದ ಮನೋವೈದ್ಯ ಹಾಗೂ ಆಡಳಿತ ವೈದ್ಯಾಧಿಕಾರಿ ಡಾ.ಆರ್. ಮಂಜುನಾಥ್ ಉಪನ್ಯಾಸ ನೀಡಲಿದ್ದಾರೆ. ತಾಲ್ಲೂಕು ಆರೋಗ್ಯ ಶಿಕ್ಷಣಾಧಿಕಾರಿ ಎಸ್.ಎನ್. ಮಂಜುನಾಥ್ ಕಾರ್ಯಕ್ರಮ ನಿರೂಪಿಸಲಿದ್ದಾರೆ ಎಂದು ಪ್ರಕಟಣೆ ತಿಳಿಸಿದೆ.

### ಜೂನ್ 4 ರಂದು ನಿಷೇಧಾಜ್ಞೆ ಜಾರಿ

» **ದಾವಣಗೆರೆ**

ಲೋಕಸಭಾ ಸಾರ್ವತ್ರಿಕ ಚುನಾವಣೆಯ ಮತ ಎಣಿಕೆ ಹಿನ್ನಲೆಯಲ್ಲಿ ದಾವಣಗೆರೆ ಜಿಲ್ಲೆಯಾದ್ಯಂತ ಜೂನ್ 4 ರಂದು ಬೆಳಿಗ್ಗೆ 6 ಗಂಟೆಯಿಂದ ಜೂನ್ 5ರ ಬೆಳಿಗ್ಗೆ 6 ಗಂಟೆಯವರೆಗೆ ನಿಷೇಧಾಜ್ಞೆ ಜಾರಿಗೊಳಿಸಿ ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ದಂಡಾಧಿಕಾರಿ ಡಾ.ವೆಂಕಟೇಶ್.ಎಂ.ವಿ ಆದೇಶಿಸಿರುತ್ತಾರೆ. ದಾವಣಗೆರೆ ಲೋಕಸಭಾ ಕ್ಷೇತ್ರದ ಮತಎಣಿಕೆ ಕಾರ್ಯ ದಾವಣಗೆರೆ ವಿಶ್ವವಿದ್ಯಾಲಯದ ಕಟ್ಟಡದಲ್ಲಿ ಜೂನ್ 4 ರಂದು ನಡೆಯಲಿದೆ. ಗೆದ್ದಂತಹ ರಾಜಕೀಯ ಅಭ್ಯರ್ಥಿಗಳ ಪರವಾಗಿ ಕಾರ್ಯಕರ್ತರು ಗುಂಪು ಸೇರಿ ಪಟಾಕಿ ಹೊಡೆಯುವುದು, ಸಾರ್ವಜನಿಕರ ಸಂಚಾರಕ್ಕೆ ತೊಂದರೆ ಉಂಟು ಮಾಡುವುದು ನಿಷಿದ್ಧ ಹಾಗೂ ಪಟಾಕಿ ಸಿಡಿಸುವಂತಿಲ್ಲ ಮತ್ತು ಗುಂಪು ಸೇರುವಂತಿಲ್ಲ.

# ಮಕ್ಕಳಲ್ಲಿ ವೈಜ್ಞಾನಿಕ, ವೈಚಾರಿಕ ಚಿಂತನೆ ಬಿತ್ತಿ

» **ಚಿತ್ರದುರ್ಗ**

ಮಕ್ಕಳಲ್ಲಿ ವೈಜ್ಞಾನಿಕ ಮತ್ತು ವೈಚಾರಿಕ ಚಿಂತನೆಯನ್ನು ಬಿತ್ತಿ ಮೂಢನಂಬಿಕೆಯಿಂದ ಹೊರ ತರುವ ಕೆಲಸ ಮಾಡುವಲ್ಲಿ ಶಿಕ್ಷಕರುಗಳ ಪಾತ್ರ ದೊಡ್ಡದು ಎಂದು ಚಿತ್ರದುರ್ಗ ಸೈನ್ಸ್ ಫೌಂಡೇಷನ್ ಅಧ್ಯಕ್ಷ ಡಾ.ಜಿ.ಎನ್.ಮಲ್ಲಿಕಾರ್ಜುನಪ್ಪ ತಿಳಿಸಿದರು.

ಬಾಪೂಜಿ ಶಿಕ್ಷಣ ಮಹಾವಿದ್ಯಾಲಯ, ಚಿತ್ರದುರ್ಗ ಸೈನ್ಸ್ ಫೌಂಡೇಷನ್, ಜಿಲ್ಲಾ ಶರಣ ಸಾಹಿತ್ಯ ಪರಿಷತ್ತು ಇವರುಗಳ ಸಂಯುಕ್ತಾಶ್ರಯದಲ್ಲಿ ಪಿಳ್ಳೆಕೆರನಹಳ್ಳಿಯಲ್ಲಿರುವ ಬಾಪೂಜಿ ಶಿಕ್ಷಣ ಮಹಾವಿದ್ಯಾಲಯದಲ್ಲಿ ಬುಧವಾರ ನಡೆದ ಪವಾಡಗಳ ಗುಟ್ಟು ಬಯಲು ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು.

ವಿಜ್ಞಾನ, ನಂಬಿಕೆ ಎನ್ನುವ ಸವಾಲು ನಮ್ಮ ಮುಂದಿದೆ. ವಿಜ್ಞಾನದಲ್ಲಿ ಅಭಿವೃದ್ದಿಯನ್ನು ಕಂಡುಕೊಳ್ಳಬಹುದು. ಮೊದಲು ಶಿಕ್ಷಕರುಗಳು ವೈಚಾರಿಕ ಪ್ರಜ್ಞೆ ಮೂಡಿಸಿಕೊಂಡು ಪ್ರಶಿಕ್ಷಣಾರ್ಥಿಗಳಿಗೆ ಸ್ವಾಭಿಮಾನಿಗಳಾಗಿ ಬದುಕುವುದನ್ನು ಕಲಿಸಬೇಕು.ವಿಜ್ಞಾನವೃತ್ತಿಬದುಕಾಗಿದೆಯೇ ಹೊರತು ಪರಿಪೂರ್ಣ, ಸರ್ವತೋಮುಖ



ಅಭಿವೃದ್ದಿಯಾಗಿಲ್ಲ.ನಮ್ಮ ದೇಶದಲ್ಲಿ ಮೌಢ್ಯ ಜಾಸ್ತಿಯಿದೆ. ಅವೈಜ್ಞಾನಿಕ ವಿಚಾರಗಳನ್ನು ವಿಜ್ಞಾನದ ನೆಲೆಯಲ್ಲಿ ನೋಡಿ ಪ್ರಶ್ನಿಸುವ ಗುಣ ಪ್ರತಿಯೊಬ್ಬರಲ್ಲಿಯೂ ಬೆಳೆಯಬೇಕು ಎಂದು ಹೇಳಿದರು.

ಜನರನ್ನು ಮೌಢ್ಯದಲ್ಲಿಯೇ ಉಳಿಸಿ ಗುಲಾಮಗಿರಿಯತ್ತ ತಳ್ಳುವ ಪದ್ದತಿ ದಿನದಿಂದ ದಿನೆ ಜಾಸ್ತಿಯಾಗುತ್ತಿದೆ. ಪವಾಡ ಅನ್ನುವುದೇ ಒಂದು ಸುಳ್ಳು. ಹಾಗಾಗಿ ಶಿಕ್ಷಕರುಗಳು ಮಕ್ಕಳಲ್ಲಿ ವೈಜ್ಞಾನಿಕ ಮನೋಭಾವನೆ ಬೆಳೆಸಬೇಕು. ಮೂಢನಂಬಿಕೆಯನ್ನು ನಂಬುವ ಬದಲು ನಿಮ್ಮ ಶಕ್ತಿಯ ಮೇಲೆ ಆತ್ಮವಿಶ್ವಾಸವಿಟ್ಟುಕೊಳ್ಳಿ ಅವಲೋಕನ, ಅನುಭವ, ಅಭಿವ್ಯಕ್ತಿ ಎನ್ನುವುದು ಶಿಕ್ಷಣದ ಒಂದು ಭಾಗವಾಗಬೇಕೆಂದು ಪ್ರಶಿಕ್ಷಣಾರ್ಥಿಗಳಿಗೆ ಕರೆ ನೀಡಿದರು.

ಚಿತ್ರದುರ್ಗ ಸೈನ್ಸ್ ಫೌಂಡೇಷನ್ ಕಾರ್ಯದರ್ಶಿ ಹೆಚ್.ಎಸ್.ಟಿ.ಸ್ವಾಮಿ ಮಾತನಾಡಿ ವಿದ್ಯಾರ್ಥಿಗಳಿಂದ ಹಿಡಿದು ಜನಸಾಮಾನ್ಯರವರೆಗೆ ಮೂಢನಂಬಿಕೆ ಹುಟ್ಟಿಕೊಂಡಿದೆ. ಅಂಧಕಾರ, ಮೌಢ್ಯವನ್ನು ತೊಲಗಿಸಬೇಕಾದರೆ ವಿಜ್ಞಾನದಿಂದ ಮಾತ್ರ ಸಾಧ್ಯ. ವೈಜ್ಞಾನಿಕ ಸತ್ಯವನ್ನು ಶಿಕ್ಷಕರು ತಿಳಿದುಕೊಂಡು ಮಕ್ಕಳ ಮನಸ್ಸಿನಲ್ಲಿ ಬಿತ್ತಬೇಕು. ಸೂರ್ಯಗ್ರಹಣ, ಚಂದ್ರಗ್ರಹಣವೆಂದರೆ ಕೆಲವರು ಹೆದರಿಕೊಂಡು ಮನೆಯಿಂದ ಹೊರಗೆ ಬರುವುದಿಲ್ಲ. ಅವೈಜ್ಞಾನಿಕತೆ ಮನೆ ಮಾಡಿದೆ. ವೈಜ್ಞಾನಿಕ ಚಿಂತನೆ ಬೆಳೆಸಿಕೊಳ್ಳಿ ಎಂದು ಪ್ರಶಿಕ್ಷಣಾರ್ಥಿಗಳಿಗೆ ಕಿವಿಮಾತು ಹೇಳಿದರು.

ಚಿತ್ರದುರ್ಗ ಸೈನ್ಸ್ ಫೌಂಡೇಷನ್ ಉಪಾಧ್ಯಕ್ಷಚಳ್ಳಕೆರೆಯರ್ರಿಸ್ವಾಮಿ ಮಾತನಾಡಿ ಪವಾಡವೆಂದರೆ ಪ್ರಕೃತಿಯ ನಿಯಮಗಳಿಗೆ ವಿರುದ್ಧವಾದುದು. ವಿಜ್ಞಾನವನ್ನು ಸರಿಯಾಗಿ ತಿಳಿದುಕೊಂಡ ಸಾಮಾನ್ಯ ಜ್ಞಾನವುಳ್ಳವರು ಮೂಢನಂಬಿಕೆಯನ್ನು ಪ್ರಶ್ನಿಸಬಹುದು. ಕೆಲವು ವರ್ಷಗಳ ಹಿಂದೆ ಗಣಪತಿ ಹಾಲು ಕುಡಿಯುತ್ತದೆಂದು ಎಲ್ಲೆಡೆ ಹಬ್ಬಿದಾಗ ಪ್ರಜ್ಞಾವಂತರು ಕೂಡ ಗಣಪತಿಗೆ ಹಾಲನ್ನು ಕುಡಿಸುತ್ತಿದ್ದಿದು, ನಿಜಕ್ಕೂ ದುರಂತ ಎಂದರು.

ಬಾಪೂಜಿ ಸಮೂಹ ಸಂಸ್ಥೆಗಳ ಕಾರ್ಯದರ್ಶಿ ಹಾಗೂ ಜಿಲ್ಲಾ ಶರಣ ಸಾಹಿತ್ಯ ಪರಿಷತ್ ಅಧ್ಯಕ್ಷ ಕೆ.ಎಂ.ವೀರೇಶ್ ಅಧ್ಯಕ್ಷತೆ ವಹಿಸಿದ್ದರು.

ಹಿರಿಯೂರಿನ ಗಿರೀಶ ಶಿಕ್ಷಣ ಮಹಾವಿದ್ಯಾಲಯದ ಪ್ರಾಧ್ಯಾಪಕರಾದ ಹೆಚ್.ಮಂಜುನಾಥ್, ಬಾಪೂಜಿ ಶಿಕ್ಷಣ ಮಹಾವಿದ್ಯಾಲಯದ ಪ್ರಾಚಾರ್ಯರಾದ ಶ್ರೀಮತಿ ಎಂ.ಆರ್.ಜಯಲಕ್ಷ್ಮಿ, ಚಿತ್ರದುರ್ಗ ಸೈನ್ಸ್ ಫೌಂಡೇಷನ್ ಖಜಾಂಚಿ ನಾಗಲಿಂಗರೆಡ್ಡಿ ವೇದಿಕೆಯಲ್ಲಿದ್ದರು.

# ತ್ಯಾಜ್ಯ ನಿರ್ವಾಹಣೆಗೆ ಒತ್ತು ನೀಡುವ ಮೂಲಕ ಪರಿಸರ ಸಂರಕ್ಷಣೆ ಕುರಿತು ಕಾನೂನು ಅರಿವು

» **ದಾವಣಗೆರೆ**

ಘನ ತ್ಯಾಜ್ಯ ನಿರ್ವಹಣೆಗೆ ಪ್ರಾಮುಖ್ಯತೆ ನೀಡಿ ಪರಿಸರ ಸಂರಕ್ಷಣೆ ಮಾಡಿದರೆ ಮಾತ್ರ ಪರಿಸರ ಉಳಿದೀತು ಎಂದು ಹಿರಿಯ ಸಿವಿಲ್ ನ್ಯಾಯಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಮಹಾವೀರ್.ಮ.ಕೆರೆಣ್ಣವರ ತಿಳಿಸಿದರು.

ಬುಧವಾರ(29) ರಂದು ಜೈನ್ ಇಂಜಿನಿಯರಿಂಗ್ ಕಾಲೇಜಿನ ಆವರಣದಲ್ಲಿ ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿ, ಜೈನ್ ಇಂಜಿನಿಯರಿಂಗ್ ಕಾಲೇಜು ಮತ್ತು ಮಹಾನಗರ ಪಾಲಿಕೆ ಇವರುಗಳ ಸಂಯುಕ್ತಾಶ್ರಯದಲ್ಲಿ ಆಯೋಜಿಸಲಾಗಿದ್ದ ಘನ ತ್ಯಾಜ್ಯ ನಿರ್ವಾಹಣೆಗೆ ಒತ್ತು ನೀಡುವ ಮೂಲಕ ಪರಿಸರ ಸಂರಕ್ಷಣೆ ಕುರಿತು ಕಾನೂನು ಅರಿವು ನೆರವು ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದರು.

ಘನ ತ್ಯಾಜ್ಯ ನಿರ್ವಹಾಣೆ ಇಂದಿನ ಪರಿಸರಕ್ಕೆ ಒಂದು ಅತಿ ದೊಡ್ಡ ಸವಾಲಾಗಿದ್ದು ಇದನ್ನು ಸೂಕ್ತ ರೀತಿಯಾಗಿ ನಿರ್ವಹಣೆ ಮಾಡಿದರೆ ಮಾತ್ರ ಪರಿಸರ ಉಳಿಯುತ್ತದೆ. ಇಲ್ಲವಾದರೆ ನಮ್ಮ ಪರಿಸರದ ಭವಿಷ್ಯ ಮತ್ತು ಜೀವ ಸಂಕುಲದ ರಕ್ಷಣೆಗೆ ಬಹು ದೊಡ್ಡ ಸಮಸ್ಯೆಯಾಗುತ್ತದೆ ಎಂದರು.

ಜೈನ್ ಇಂಜಿನಿಯರಿಂಗ್ ಕಾಲೇಜಿನ ಪ್ರಾಂಶುಪಾಲರಾದ ಗಣೇಶ್ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಮಾತನಾಡಿ ವಿದ್ಯಾರ್ಥಿಗಳು ಭವಿಷ್ಯದಲ್ಲಿ ಹಲವು ಕಾರಣಗಳಿಗಾಗಿ ಇತರೆ ಶಿಕ್ಷಣ ಸಂಸ್ಥೆಗಳಿಗೆ ಭೇಟಿ ನೀಡಬೇಕಾಗಿದ್ದು ಆ ಸಮಯದಲ್ಲೂ ಕೂಡ ಪರಿಸರ ವಿಷಯದ ಬಗ್ಗೆ ಜಾಗೃತಿ ಮೂಡಿಸುವ ಕೆಲಸ ಮಾಡಬೇಕೆಂದು ಕರೆ ನೀಡಿದರು.ಜಿಲ್ಲಾ ಘನ ತ್ಯಾಜ್ಯ ನಿರ್ವಹಣೆಯ ಯೋಜನಾಧಿಕಾರಿ ಮಹಾಂತೇಶ ಮಾತನಾಡಿ ದಾವಣಗೆರೆ ನಗರದಲ್ಲಿ ಪ್ರತಿ ದಿನ ಸುಮಾರು 170




ಟ□□ಗಿಂತ ಹೆಚ್ಚಿನ ತ್ಯಾಜ್ಯ ಉತ್ಪತ್ತಿಯಾಗುತ್ತಿದ್ದು ಈ ಬಗ್ಗೆ ಪಾಲಿಕೆಯವರು ಮತ್ತು ಸರ್ಕಾರದವರು ನೀಡುವ ಸಲಹೆ ಸೂಚನೆಗಳನ್ನು ಸಾರ್ವಜನಿಕರು ಪಾಲಿಸಿದರೆ ಮಾತ್ರ ತ್ಯಾಜ್ಯ ನಿರ್ವಹಣೆ ಸರಿಯಾಗಿ ನಡೆಯುತ್ತದೆ. ಇಲ್ಲವಾದರೆ ಭವಿಷ್ಯದಲ್ಲಿ ತುಂಬಾ ಸಮಸ್ಯೆಯನ್ನು ಎದುರಿಸಬೇಕಾಗುತ್ತದೆ ಎಂದು ತಿಳಿಸಿದರು. ಇದೇ ರೀತಿ ಜಿಲ್ಲೆಯಲ್ಲಿ ಎಲ್ಲಾ ಕಡೆ ಸಾರ್ವಜನಿಕರು ಇಲಾಖೆಗಳ ಜೊತೆಗೆ ಕೈ ಜೋಡಿಸಿ ತ್ಯಾಜ್ಯ ನಿರ್ವಹಣೆಗೆ ಸಹಕರಿಸಬೇಕೆಂದು ಮನವಿ ಮಾಡಿದರು.

ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿಯ ಪ್ರಾದೇಶಿಕ ಅಧಿಕಾರಿ ಡಾ. ಹೆಚ್.ಲಕ್ಷ್ಮೀಕಾಂತ್ ಮಾತನಾಡಿ ಜೀವ ಸಂಕುಲಕ್ಕೆ ಮಣ್ಣು, ನೀರು ಮತ್ತು ಮರ ಇವುಗಳ ಅವಶ್ಯಕತೆಯ ಬಗ್ಗೆ ಮತ್ತು ಅವುಗಳು ಜೀವ ರಾಶಿಗಳ ಅಗತ್ಯತೆಗಾಗಿ ನಿರ್ವಹಿಸುತ್ತಿರುವ ಕಾರ್ಯಗಳ ಬಗ್ಗೆ ತಿಳಿಸಿದರು. ಪ್ಲಾಸ್ಟಿಕ್ ಅವಶ್ಯಕತೆ, ಅದರ ಮಿತ ಬಳಕೆಯ ಬಗ್ಗೆ ಸಂಪೂರ್ಣ ಮಾಹಿತಿ ನೀಡಿದರು. ವಿದ್ಯುನ್ಮಾನ ಉಪಕರಣಗಳ ತಯಾರಿಕೆ, ಬಳಕೆ ಮತ್ತು ನಿರ್ವಹಣೆ ಕುರಿತು ಸಂಪೂರ್ಣ ವಿವರವನ್ನು ನೀಡಿದ ಅವರು ತಂತ್ರಜ್ಞಾನ ಮಾನವ ಜೀವಕ್ಕೆ ಎಷ್ಟು ಅವಶ್ಯಕವಾಗಿದೆಯೋ ಅಷ್ಟಕ್ಕೆ ಮಾತ್ರ ಬಳಸಿಕೊಂಡರೆ ಸೂಕ್ತ ಎಂದು ತಿಳಿಸಿದರು. ಆರೋಗ್ಯಕರ ಜೀವನಕ್ಕಾಗಿ ಆಹಾರ ಪದ್ಧತಿ, ಜೀವನ ಶೈಲಿ ಮತ್ತು ಪರಿಸರದ ಸಂರಕ್ಷಣೆ ಅವಶ್ಯಕತೆ ಇದೆ ಎಂದು ತಿಳಿಸಿದರು.

ಕಾರ್ಯಕ್ರಮದಲ್ಲಿ ಕಾಲೇಜಿನ ಪ್ರಾಚಾರ್ಯರರಾದ ಡಾ.ರಾಹುಲ್ ಪಾಟೀಲ್, ಮತ್ತು ಗುರುಪ್ರಶಾಂತ್, ಕಾಲೇಜಿನ ಇತರೆ ಭೋದಕ ಮತ್ತು ಭೋದಕೇತರ ಸಿಬ್ಬಂದಿಗಳು ವಿದಾರ್ಥಿಗಳು, ಉಪಸ್ಥಿತರಿದ್ದರು.

## ಪರಿಷತ್ ಚುನಾವಣೆ: ನಾರಾಯಣಸ್ವಾಮಿ ಪರ ಪ್ರಚಾರ



» **ಚಿತ್ರದುರ್ಗ**

ಆಗ್ನೇಯ ಶಿಕ್ಷಕರ ಕ್ಷೇತ್ರದ ಚುನಾವಣೆಯ ಅಂಗವಾಗಿ ಇಂದು ಚಿತ್ರದುರ್ಗದಲ್ಲಿ ಬಿಜೆಪಿ ಹಾಗೂ ಜೆಡಿಎಸ್ ಮೈತ್ರಿ ಅಭ್ಯರ್ಥಿಯಾದ ವೈ ಎ ನಾರಾಯಣಸ್ವಾಮಿ ಅವರ ಪರವಾಗಿ ಚಿತ್ರದುರ್ಗ ನಗರ ಮಂಡಲದ ಪದಾಧಿಕಾರಿಗಳು ಹಲವಾರು ಶಾಲಾ ಕಾಲೇಜುಗಳಿಗೆ ಭೇಟಿ ನೀಡಿ ಶಿಕ್ಷಕರ ಬಳಿ ನಾರಾಯಣಸ್ವಾಮಿಯವರ ಪರವಾಗಿ ಮತಯಾಚನೆ ಮಾಡಿದರು. ಸರ್ಕಾರಿ ಬಾಲಕರ ಪದವಿ ಪೂರ್ವ ಕಾಲೇಜು ಮತ್ತು ಪ್ರೌಢಶಾಲೆ.ಐಟಿಐ ಕಾಲೇಜು ವಾಸುದೇವ ರೆಡ್ಡಿ ಸ್ಮಾರಕ ಪ್ರೌಢಶಾಲೆ ತಗ್ಗಿನಮಠ ಐಟಿಐ ಕಾಲೇಜು ಕೋಟೆ ಸರ್ಕಾರಿ ಪ್ರೌಢಶಾಲೆ ಸರ್ಕಾರಿ ಬಾಲಕಿಯರ ಪದವಿ ಪೂರ್ವ ಕಾಲೇಜು ಮತ್ತು ಪ್ರೌಢಶಾಲೆ.ಪಾರ್ಶ್ವನಾಥ ಶಾಲೆ ಶಾರದಾ ಪ್ರೌಢಶಾಲೆ ಕಬಿರಾನಂದ ಆಶ್ರಮದ ಶಾಲೆ.ರೋಟರಿ ಪ್ರೌಢಶಾಲೆ.ಅನುಪಮಾ ವಿದ್ಯಾಸಂಸ್ಥೆ ರಾಘವೇಂದ್ರ ವಿದ್ಯಾ ಸಂಸ್ಥೆ ಸಿದ್ದರಾಮೇಶ್ವರ ಪ್ರೌಢಶಾಲೆಗಳಿಗೆ ಭೇಟಿ ನೀಡಿ ಮತಯಾಚನೆ ಮಾಡಿದರು. ಈ ಸಂದರ್ಭದಲ್ಲಿ ಚಿತ್ರದುರ್ಗ ನಗರ ಬಿಜೆಪಿ ಅಧ್ಯಕ್ಷರಾದ ಚಾಲುಕ್ಯ ನವೀನ್, ಜಿಲ್ಲಾ ಮಾಧ್ಯಮ ವಕ್ತಾರರಾದ ನಾಗರಾಜ್ ಬೇಂದ್ರೆ, ನಗರಸಭಾ ಸದಸ್ಯರಾದ ಹರೀಶ್, ಉಪಾಧ್ಯಕ್ಷರಾದ ಬಸವೇಶ್, ಪಲ್ಲವಿ ಪ್ರಸನ್ನ, ಕೃಷ್ಣ ರಾಮಕೃಷ್ಣ, ಪರಶುರಾಮ್, ತಿಪ್ಪೇಸ್ವಾಮಿ, ಅರುಣ ಕುಮಾರಿ ಭಾಗವಹಿಸಿದ್ದರು



**ದೊಡ್ಡ ಉಳ್ಳಾರ್ತಿ ರಸ್ತೆಯಲ್ಲಿ ವಿದ್ಯುತ್ ಕಂಬದ ಕೆಳಗಡೆಯೇ ಗಿಡಗಳನ್ನು ನೆಟ್ಟಿರುವುದಕ್ಕೆ ಆಕ್ಷೇಪ ವ್ಯಕ್ತಪಡಿಸಿದ ಬೂದಿಹಳ್ಳಿರಾಜಣ್ಣ**

# ವಿದ್ಯುತ್ ಕಂಬಗಳ ಸನ್ನಿಹದಲ್ಲೇ ಅರಣ್ಯ ಇಲಾಖೆಯಿಂದ ಗಿಡ ನೆಡುವ ಕಾರ್ಯಕ್ಕೆ ಆಕ್ಷೇಪ

» **ಚಳ್ಳಕೆರೆ**

ಅರಣ್ಯ ಇಲಾಖೆವತಿಯಿಂದ ಚಳ್ಳಕೆರೆಯಿಂದ ದೊಡ್ಡ ಉಳ್ಳಾರ್ತಿ ಮೂಲಕ ಕಲ್ಯಾಣದುರ್ಗಕ್ಕೆ ಸಂಪರ್ಕ ನೀಡುವ ರಸ್ತೆಯ ಪಕ್ಕದಲ್ಲಿ ಇತ್ತೀಚೆಗೆ ಗಿಡಗಳನ್ನು ನೆಡಲಾಗಿದ್ದು, 11 ಕೆ.ವಿ. ಸಂಪರ್ಕ ನೀಡುವ ವಿದ್ಯುತ್ ಕಂಬದ ಎರಡ್ಮೂರು ಅಡಿಗಳ ದೂರದಲ್ಲಿ ಗಿಡಗಳು ನೆಟ್ಟಿದ್ದು ಇದರಿಂದ ಅಪಾಯವಿರುವ ಬಗ್ಗೆ ಅಧಿಕಾರಿಗಳು ಗಿಡಗಳನ್ನು ಹೆಚ್ಚು ಅಂತರದಲ್ಲಿ ನಡೆಸಬೇಕೆಂದು ತಾಲ್ಲೂಕು ಕಾಡುಗೊಲ್ಲರ ಸಂಘದ ಅಧ್ಯಕ್ಷ ಬೂದಿಹಳ್ಳಿರಾಜಣ್ಣ ಆಗ್ರಹಿಸಿದ್ದಾರೆ.

ಅವರು, ಪತ್ರಿಕೆಯೊಂದಿಗೆ ಮಾತನಾಡಿ, ದೊಡ್ಡ ಉಳ್ಳಾರ್ತಿಯಿಂದ ಚಿತ್ರನಾಯಕನಹಳ್ಳಿ ತನಕ ಗಿಡಗಳನ್ನು ನೆಟ್ಟಿದ್ದು ಬಹುತೇಕ ಅವೆಲ್ಲವೂ ವಿದ್ಯುತ್ ಕಂಬಕ್ಕೆ ಹತ್ತಿರವಿವೆ, ಮುಂದೆ ಬೆಳೆದ ದೊಡ್ಡದಾದಾಗ ಅವುಗಳು ಲೈನ್‌ಗೆ ತಗಲುವ ದೃಷ್ಟಿಯಿಂದ ಕತ್ತರಿಸುವ ಬದಲು ಅರಣ್ಯ ಇಲಾಖೆ ಅಧಿಕಾರಿಗಳು ಮುನ್ನೆಚ್ಚರಿಕೆಯಾಗಿ ದೂರ ನೆಟ್ಟು ಪೋಷಣೆ ಮಾಡಬೇಕು. ಇದರಿಂದ ಮುಂದಿನ ಅಪಾಯಕ್ಕೆ ಈಗಲೇ ಪರಿಹಾರ ಕಂಡುಕೊಂಡತ್ತೆ ಆಗುತ್ತದೆ ಎಂದಿದ್ದಾರೆ. ಈ ಬಗ್ಗೆ ಅರಣ್ಯ ಇಲಾಖೆ ಅಧಿಕಾರಿಗಳು ಗಮನಕ್ಕೆ ತಂದಿರುವುದಾಗಿ ತಿಳಿಸಿದ್ದಾರೆ.

**ಅರಣ್ಯ ಅಧಿಕಾರಿ ಸ್ಪಷ್ಟನೆ:** ಅರಣ್ಯ ಅಧಿಕಾರಿ ಬಹುಗುಣ ಈ ಬಗ್ಗೆ ಪ್ರತಿಕ್ರಿಯೆ ನೀಡಿ, ಒಟ್ಟು ರಸ್ತೆಯ ಎರಡೂ ಬಂದಿಯಲ್ಲಿ 900 ಗಿಡಗಳನ್ನು ನೆಡುವ ಯೋಜನೆ ಇದೆ. ಪ್ರಸ್ತುತ ದೊಡ್ಡ ಉಳ್ಳಾರ್ತಿಯಿಂದ ಚಿತ್ರನಾಯಕನಹಳ್ಳಿ ಕ್ರಾಸ್‌ವರೆಗೂ ನೂರು ಗಿಡಗಳನ್ನು ನೆಡಲಾಗಿದೆ. ವಿದ್ಯುತ್ ಕಂಬದಿಂದ ಸುಮಾರು ಎಂಟ್ಟತ್ತು ಅಡಿಯ ದೂರದಲ್ಲಿ ಗಿಡ ನೆಡಲಾಗಿದೆ.

## ಪ್ರಮುಖ ಸುದ್ದಿ

### ರೋವರ್ಸ್ ಮತ್ತು ರೇಂಜರ್ಸ್‌ನ ಎರಡು ದಿನಗಳ ತರಬೇತಿ ಶಿಬಿರ ಮುಕ್ತಾಯ

# ವಿದ್ಯಾರ್ಥಿಗಳ ಕ್ರಿಯಾಶೀಲತೆಗೆ ಶಿಬಿರ ಸಹಕಾರಿ: ರಾಜೇಶ್

» **ಚಳ್ಳಕೆರೆ**

ಕಳೆದ ಹಲವಾರು ವರ್ಷಗಳಿಂದ ದಾವಣಗೆರೆ ವಿಶ್ವವಿದ್ಯಾಲಯ ವ್ಯಾಪ್ತಿಗಳ ಕಾಲೇಜುಗಳಲ್ಲಿ ರೋವರ್ಸ್ ಮತ್ತು ರೇಂಜರ್ಸ್ ಚಟುವಟಿಕೆಗಳನ್ನು ವಿಸ್ತರಣೆ ಮಾಡುವುದಲ್ಲದೆ, ಉತ್ತಮ ತರಬೇತಿ ನೀಡಿ ವಿದ್ಯಾರ್ಥಿಗಳನ್ನು ರಾಜ್ಯ, ರಾಷ್ಟ್ರ ಮಟ್ಟದಲ್ಲಿ ಪುರಸ್ಕೃತರಾಗುವಂತೆ ತಯಾರು ಮಾಡುವ ಕಾರ್ಯವನ್ನು ಮುನ್ನಡೆಸಲಾಗುತ್ತಿದೆ ಎಂದು ಘಟಕದ ಹಿರಿಯ ಅಧಿಕಾರಿ ರಾಜೇಶ್ ವಿ.ಅವಲಕ್ಕಿ ತಿಳಿಸಿದರು.

ಅವರು, ನಗರದ ಎಚ್‌ಪಿಪಿಸಿ ಸರ್ಕಾರಿ ಪ್ರಥಮ ದರ್ಜೆ ಕಾಲೇಜು ಆವರಣದಲ್ಲಿ ಹಮ್ಮಿಕೊಂಡಿದ್ದ ವಿಶ್ವವಿದ್ಯಾಲಯ ಮಟ್ಟದ ಚಿತ್ರದುರ್ಗ ರೋವರ್ಸ್ ರೇಂಜರ್ಸ್ ವಿಭಾಗದಿಂದ ಆಯೋಜಿಸಿದ್ದ ಎರಡು ದಿನಗಳ ರೋವರ್ಸ್ ಅಂಡ್ ರೇಂಜರ್ಸ್ ಪದಕ ತರಬೇತಿ ಮತ್ತು ನಿಪುಣ ಪರೀಕ್ಷೆ



ಶಿಬಿರದ ಸಮಾರೋಪ ಸಮಾರಂಭದಲ್ಲಿ ಭಾಗವಹಿಸಿ ಮಾತನಾಡಿದರಲ್ಲದೆ, ತರಬೇತಿಗೆಯಲ್ಲಿ ಭಾಗವಹಿಸಿದ್ದ ಎಲ್ಲಾ ವಿದ್ಯಾರ್ಥಿಗಳಿಗೆ ಪ್ರಶಸ್ತಿ ಪತ್ರ ನೀಡಿ ಅಭಿನಂದಿಸಿದರು. ಪ್ರಾಸ್ತಾವಿಕವಾಗಿ ಮಾತನಾಡಿದ ಜಿಲ್ಲಾ ನೋಡಲ್ ಅಧಿಕಾರಿ, ದೈಹಿಕ ಶಿಕ್ಷಣ ನಿರ್ದೇಶಕರಾದ ಎಚ್. ತಿಪ್ಪೇಸ್ವಾಮಿ, ಎರಡು ದಿನಗಳ ಶಿಬಿರದಲ್ಲಿ ಸಾಕಷ್ಟು ಸಂಖ್ಯೆಯ ವಿದ್ಯಾರ್ಥಿಗಳು ಭಾಗವಹಿಸಿ ಕಾರ್ಯಚಟುವಟಿಕೆ ವಿಸ್ತರಿಸುವ ಬಗ್ಗೆ ಉಪಯುಕ್ತ ಮಾಹಿತಿ ಪಡೆದಿದ್ದಾರೆ. ವಿದ್ಯಾರ್ಥಿಗಳಿಗೆ ಉತ್ತಮ ಮಾರ್ಗದರ್ಶನವೂ ದೊರಕಿದೆ, ಇಂತಹ ಶಿಬಿರಗಳಿಂದ ವಿದ್ಯಾರ್ಥಿಗಳ ಕಲಿಕೆಯ ಉತ್ಸಾಹ ಹೆಚ್ಚುತ್ತದೆ. ನಿರಂತರವಾಗಿ ಇಂತಹ ಶಿಬಿರ ಆಯೋಜಿಸಲು ಎಲ್ಲರ ಸಹಕಾರ ಕೋರುವೆ ಎಂದರು.

ಸಮಾರೋಪ ಸಮಾರಂಭದಲ್ಲಿ ರೋವರ್ಸ್ ಅಂಡ್ ರೇಂಜರ್ಸ್ ವಿಭಾಗದ ಮುಖ್ಯಸ್ಥೆ ಡಾ.ಲೀಲಾವತಿ, ಸಹಪ್ರಾಧ್ಯಾಪಕ ಡಾ.ಆರ್.ಗಂಗಾಧರ, ಪ್ರೊ.ಗಿರೀಶ್, ಜಗನ್ನಾಥ, ಜಿಲ್ಲಾ ಸಂಘಟಕ ಜಿ.ವಿ.ಪಾಟೀಲ್ ಮುಂತಾದವರು ಕಾರ್ಯಕ್ರಮದಲ್ಲಿ ಭಾಗವಹಿಸಿದ್ದರು.



# ಆಧುನಿಕ ಭಾರತದಲ್ಲಿ ಸ್ತ್ರೀವಾದ ಮತ್ತು ಶಿಕ್ಷಣ





ಸ್ತ್ರೀವಾದ ಅಥವಾ ಫೆಮಿನಿಸಂ ಎಂಬುದು ಒಂದು ಸಾಮಾಜಿಕ ಹಾಗೂ ರಾಜಕೀಯ ಸಿದ್ಧಾಂತ. ಇದು ಪಾಶ್ಚಾತ್ಯ ನೆಲದಲ್ಲಿ ಮೂಡಿಬಂದದ್ದಾದರೂ ಜಗತ್ತಿನೆಲ್ಲೆಡೆಗೂ ಹಬ್ಬಿ ಪ್ರಚಲಿತದಲ್ಲಿರುವ ಸಿದ್ಧಾಂತವಾಗಿದೆ. ಇದು ಹೋರಾಟದ ಹಿನ್ನೆಲೆ ಹೊಂದಿರುವ ಸಿದ್ಧಾಂತ. ಮಹಿಳಾ ಸಮಸ್ಯೆಗಳು ಹಾಗೂ ಮಹಿಳೆಯರನ್ನು ಈ ಸಮಸ್ಯೆಗಳಿಂದ ವಿಮೋಚನೆಗೊಳಿಸುವುದೇ ಈ ಹೋರಾಟದ ಮೂಲ ಉದ್ದೇಶ. ಇತ್ತೀಚಿನವರೆವಿಗೂ ಸ್ತ್ರೀ ಪುರುಷರ ನಡುವೆ ಲಿಂಗಾಧಾರಿತ ತಾರತಮ್ಯವಿರುವ ವ್ಯವಸ್ಥೆ ಇತ್ತು. ಈ ವ್ಯವಸ್ಥೆಯಲ್ಲಿ ಸುಧಾರಣೆಯನ್ನು ತರಲು ನಡೆಸುವ ಹಕ್ಕೊತ್ತಾಯ, ರಾಜಕೀಯ, ಆರ್ಥಿಕ ಹಾಗೂ ಸಾಮಾಜಿಕ ಬದುಕಿನ ನೆಲೆಗಳಲ್ಲಿ ಸ್ತ್ರೀಪುರುಷರನ್ನು ಸಮಾನವಾಗಿ ಸ್ಥಾಪಿಸಬಲ್ಲ ವ್ಯವಸ್ಥೆಗಾಗಿ ನಡೆಸುವ ಹೋರಾಟ – ಇವುಗಳ ಹಿಂದಿರುವ ತಾತ್ವಿಕ ನೆಲೆಗಟ್ಟನ್ನು ಸ್ತ್ರೀವಾದ ಎನ್ನಬಹುದು.

ಮಹಿಳೆಯರು ತಮ್ಮ ಸ್ಥಾನಮಾನ ಹಾಗೂ ಹಕ್ಕುಗಳಿಗಾಗಿ ಯುರೋಪ್ ಖಂಡದ ಜರ್ಮನಿ, ನೆದರ್‌ಲ್ಯಾಂಡ್ಸ್, ಫ್ರಾನ್ಸ್ , ಇಟಲಿ ಮತ್ತು ಸ್ಕಾಂಡಿನೇವಿಯಾ ದೇಶಗಳಲ್ಲಿ ಹೋರಾಟ ಮಾಡಿದರು. ಈ ಹೋರಾಟ ಇತರ ಅನೇಕ ದೇಶಗಳಲ್ಲಿ, ಮುಖ್ಯವಾಗಿ ಬ್ರಿಟನ್ ಮತ್ತು ಉತ್ತರ ಅಮೆರಿಕಾದ ಸಂಯುಕ್ತ ಸಂಸ್ಥಾನಗಳಲ್ಲಿಯೂ ನಡೆಯಿತು. ಈ ಎಲ್ಲ ಕಡೆಗಳಲ್ಲಿ ಆಯಾದೇಶದ ಸಾಂಸ್ಕೃತಿಕ ಹಿನ್ನೆಲೆಗೆ ಅನುಗುಣವಾಗಿ ನಡೆದ ಈ ಹೋರಾಟಕ್ಕೆ ಇನ್ನೂರು ವರ್ಷಗಳಿಗೂ ಹೆಚ್ಚಿನ ಇತಿಹಾಸವಿದೆ. ವರ್ಷಗಳು ಕಳೆದಂತೆ ಈ ಹೋರಾಟಗಳು ಹೆಚ್ಚು ಶಕ್ತಿಯುತವಾಗುತ್ತಿವೆ. ಹೋರಾಟದ ತೀವ್ರತೆ ಹೆಚ್ಚಿದೆ. ಜೊತೆಗೆ ಸಮಸ್ಯೆಗಳು ಕೂಡಾ ಭಿನ್ನರೂಪವನ್ನು ಪಡೆಯುತ್ತಾ ಬಂದಿವೆ. ಸ್ತ್ರೀವಾದಿ ಸಂಘಟನೆಗಳು ಅಭಿಪ್ರಾಯಪಡುವಂತೆ ಲಿಂಗಭೇದ ನೀತಿಯಿಂದ ಮಹಿಳೆಯರ ಅನೇಕ ಸಮಸ್ಯೆಗಳು ಉದ್ಭವಿಸಿವೆ. ಮಹಿಳೆ ಅಥವಾ ಪುರುಷರ ನಡುವೆ ಸಹಜವಾದ ಕೆಲವು ಜೈವಿಕ ವ್ಯತ್ಯಾಸಗಳಿವೆ. ಈ ವ್ಯತ್ಯಾಸಗಳು ಯಾವುದೇ ರೀತಿಯಲ್ಲಿ ಪುರುಷನನ್ನು ಶ್ರೇಷ್ಠವೆಂದೂ ಸ್ತ್ರೀಯನ್ನು ಕೀಳೆಂದು ಪ್ರಮಾಣೀಕರಿಸುವುದಿಲ್ಲ.

ಭಾರತದಲ್ಲಿ ಲಿಂಗ ಸಮಾನತೆಯ ಪರಿಕಲ್ಪನೆ ಪರಿಚಯವಾಗಿದ್ದು 19 ನೆಯ ಶತಮಾನದಲ್ಲಿ. ಭಾರತೀಯರು ಪಾಶ್ಚಿಮಾತ್ಯ ಶಿಕ್ಷಣವನ್ನು ಪಡೆಯಲು ಪ್ರಾರಂಭಿಸಿದಾಗ. ಭಾರತವು ಸ್ವಾತಂತ್ರ್ಯ ಪಡೆದ ನಂತರ ಸಂವಿಧಾನಾತ್ಮಕವಾಗಿ ಸಮಾನತೆಗೆ ಒತ್ತು ನೀಡಿತು. ಸರಕಾರವು ಸಮಾನತೆ ಲಿಂಗತ್ವ ಹಾಗೂ ಧಾರ್ಮಿಕ ನೆಲೆಯ ಭೇದಭಾವಗಳನ್ನು ಹೋಗಲಾಡಿಸುವ ಕಾನೂನು ಜಾರಿಗೆ ತಂದಿತು. ಏಳು ಪಂಚವಾರ್ಷಿಕ ಯೋಜನೆಗಳು ಮಹಿಳೆಯರಿಗೆ ಆರೋಗ್ಯ, ಶಿಕ್ಷಣ, ಉದ್ಯೋಗ ಹಾಗೂ ಅಭಿವೃದ್ಧಿಗೆ ಒತ್ತುಕೊಟ್ಟರೆ ಎಂಟನೆಯ ಪಂಚವಾರ್ಷಿಕ ಯೋಜನೆಯು ಮಹಿಳೆಯರನ್ನು ಅಭಿವೃದ್ಧಿಯಲ್ಲಿ ಪಾಲುದಾರರು ಎಂದು ಘೋಷಿಸಿತು. ಇಲ್ಲಿ ಮತ್ತೆ ಗಮನಿಸಬೇಕಾದ ಮುಖ್ಯ ಅಂಶವೆಂದರೆ ಭಾರತೀಯ ಸ್ತ್ರೀವಾದಕ್ಕೂ ಪಾಶ್ಚಾತ್ಯ ಸ್ತ್ರೀವಾದಕ್ಕೂ ಇರುವ ವ್ಯತ್ಯಾಸ. ಭಾರತೀಯ ವಾತಾವರಣದಲ್ಲಿ ಮಾನವಹಕ್ಕುಗಳ ನೆಲೆಯಲ್ಲಿ ಭಾರತೀಯ ಮಹಿಳೆ ಹಾಗೂ ಸ್ತ್ರೀವಾದವನ್ನು ಅರ್ಥಮಾಡಿಕೊಳ್ಳಬೇಕಾಗುತ್ತದೆ. ಉದಾಹರಣೆಗೆ ಹಸಿವು , ಬಡತನ , ಅನಾರೋಗ್ಯ , ಶಿಶುಮರಣ, ಭೂಮಾಲೀಕರು ಮಹಿಳಾ ಕಾರ್ಮಿಕರ ದೈಹಿಕ ಶ್ರಮವನ್ನು ಉಪಯೋಗಿಸುವುದು, ಸಂಪ್ರದಾಯಗಳ ಅಮಾನವೀಯತೆ ಮತ್ತು ಹೊರೆ ಕಟ್ಟುಕಟ್ಟಳೆಗಳ ಕೊನೆಯಿಲ್ಲದ ಬೇಡಿಕೆ ಅಥವಾ ಕಾರಣವಿಲ್ಲದೆ ತೆಗಳಿಕೆ, ಹೀಗಳೆತ, ಹೊಡೆತ ಇವೆಲ್ಲವುಗಳ ಬಗ್ಗೆ ಭಾರತೀಯರ ಹಾಗೂ ಪಾಶ್ಚಿಮಾತ್ಯರ ಗ್ರಹಿಕೆ ಭಿನ್ನವಾಗಿದೆ.


ಕಾನೂನು ಕಟ್ಟಳೆಗಳ ನೆಲೆಯಲ್ಲಿ ಭಾರತೀಯ ಮಹಿಳೆಯರ ಸ್ಥಿತಿಗತಿ ಉತ್ತಮವಾಗಿದೆ ಎಂದು ಕಂಡುಬಂದರೂ ವಾಸ್ತವದಲ್ಲಿ ಹಾಗಿಲ್ಲ. ಮಹಿಳೆಯರಿಗೆ ನೀಡಿರುವ ಸವಲತ್ತುಗಳು ಪೂರ್ಣಪ್ರಮಾಣದಲ್ಲಿ ಅವರನ್ನು ತಲುಪಿಲ್ಲ. ನೂರಾರು ವರ್ಷಗಳಿಂದ ಪಾಲಿಸುತ್ತ ಬಂದಿರುವ ಕೆಲವು ಕಟ್ಟಳೆಗಳು ಆಚರಿಸುತ್ತಿರುವ ಸಂಪ್ರದಾಯಗಳು ಭಾರತೀಯರ ಜೀವನದಲ್ಲಿ ಹಾಸುಹೊಕ್ಕಾಗಿ ಸೇರಿಕೊಂಡುಬಿಟ್ಟಿವೆ. ಧಾರ್ಮಿಕ ಕಾನೂನುಗಳು ಮತ್ತು ನಿರೀಕ್ಷೆಗಳು ಅಥವಾ ವೈಯಕ್ತಿಕ ಕಾನೂನುಗಳು (ಪ್ರತಿ ಧರ್ಮದಿಂದ ಮೂಡಿಬಂದವುಗಳು) ಭಾರತೀಯ ಸಂವಿಧಾನಾತ್ಮಕ ಕಾನೂನುಗಳಿಗೆ ಪೂರಕವಾಗಿಲ್ಲದ ಕಾರಣ ಮಹಿಳೆಯರಿಗೆ ಕಾನೂನುಬದ್ಧವಾಗಿ ದೊರಕಬೇಕಾದ ಹಕ್ಕುಗಳು ಹಾಗೂ ಅಧಿಕಾರ ಲಭ್ಯವಾಗುತ್ತಿಲ್ಲ! ಹೀಗಾದಾಗ್ಯೂ ಭಾರತ ಸರಕಾರ ಧಾರ್ಮಿಕ ಅಥವಾ ವೈಯಕ್ತಿಕ ಕಾನೂನುಗಳಲ್ಲಿ ಹಸ್ತಕ್ಷೇಪ ಮಾಡುತ್ತಿಲ್ಲ.

ಆಧುನೀಕರಣ ಪ್ರಕ್ರಿಯೆಗೆ ಒಳಗಾದ ಭಾರತಕ್ಕೆ ಆಧುನಿಕ ಮೌಲ್ಯಗಳು ರೂಢಿಯಾದವು. ಆಧುನಿಕ ಅಭಿವೃದ್ಧಿಯ ದುಡಿಮೆ ವಲಯವು ಸಂಪೂರ್ಣವಾಗಿ ಪುರುಷರಿಗೆ ಮೀಸಲಿದ್ದು ಪುರುಷಕೇಂದ್ರಿತವಾಯಿತು. ಇಲ್ಲಿ ಸ್ತ್ರೀ ಪುರುಷರ ನಡುವಿನ ವಿಭಜನೆ ಸ್ಪಷ್ಟವಾಗಿ ಕಾಣುತ್ತದೆ. ದೇಶದ ಅಭಿವೃದ್ಧಿ ಸಾಮಾಜಿಕ ಜೀವನದ ಪಾಲುದಾರಿಕೆ ಹಾಗೂ ಉತ್ಪಾದನಾ ಕಾರ್ಯಗಳು ಪುರುಷರಿಗೆ ಸೀಮಿತವಾದ ವಲಯವಾಗಿದ್ದು ವಂಶಾಭಿವೃದ್ಧಿ , ಕುಟುಂಬದ ಲಾಲನೆ, ಪಾಲನೆ ಇವುಗಳು ಮಹಿಳೆಯ ಜವಾಬ್ದಾರಿ ವಲಯವಾಯಿತು. ಶಿಕ್ಷಣ ಕ್ಷೇತ್ರವೂ ತನ್ನ ನೀತಿ ಹಾಗೂ ಪಠ್ಯಕ್ರಮಗಳಲ್ಲಿ ಇದೇ ಮೌಲ್ಯವನ್ನು ಎತ್ತಿ ಹಿಡಿಯಿತು. ಈ ರೀತಿಯಲ್ಲಿ ಸ್ಪಷ್ಟ ವಿಭಜನೆಗೆ ಮನ್ನಣೆ ನೀಡಿತು. ಶಿಕ್ಷಣದ ಈ ಧೋರಣೆ ಮತ್ತು ಕ್ರಮಗಳು ಸ್ತ್ರೀವಾದಿ ನಿಲುವಿನ ವಿರೋಧ ದಿಕ್ಕಿನಲ್ಲಿ ನಡೆಯಿತು. ಆದರೆ ಇತ್ತೀಚಿನ ದಿನಗಳಲ್ಲಿ ಶಿಕ್ಷಣದಲ್ಲಿ ಕೆಲವಾದರೂ ಪರಿಣಾಮಕಾರಿಯಾದ ಬದಲಾವಣೆಗಳನ್ನು ಕಾಣುತ್ತಿದ್ದೇವೆ.

ವಸಾಹತುಶಾಹಿ ಆಡಳಿತವು ಭಾರತವನ್ನು ಆಧುನೀಕರಣದ ಪ್ರಕ್ರಿಯೆಗೆ ಒಳಪಡಿಸುವುದರ ಜೊತೆಜೊತೆಯಲ್ಲಿಯೇ ಜಾಗತಿಕ ಮಾರುಕಟ್ಟೆಗೂ ಪರಿಚಯಿಸಿತು. ಬಂಡವಾಳಶಾಹಿಯು ಸಮಾಜದಲ್ಲಿ ತರುವ ಬದಲಾವಣೆಗಳು ಅತಂತ್ರತೆ ಇತ್ಯಾದಿಗಳು ಮನುಷ್ಯಜೀವನವನ್ನು ಸಾಕಷ್ಟು ಒತ್ತಡಕ್ಕೆ ದೂಡುವುದರ ಜೊತೆಗೆ ಮನುಷ್ಯನ ವ್ಯಕ್ತಿತ್ವವನ್ನು ಸಂಕೀರ್ಣಗೊಳಿಸುತ್ತದೆ. ಹಾಗಾಗಿ ಸಮಾಜದ ಮೌಲ್ಯಗಳು, ಜೀವನಕ್ರಮ, ಸಂಸ್ಕೃತಿ ಇವುಗಳೂ ಬದಲಾವಣೆಯನ್ನು ಹೊಂದುತ್ತವೆ. ಸ್ವಾಭಾವಿಕವಾಗಿಯೇ ಈ ಬದಲಾವಣೆಗಳು ಶಿಕ್ಷಣ ಕ್ಷೇತ್ರಕ್ಕೂ ವಿಸ್ತರಿಸುತ್ತವೆ. ಭಾರತದ ಸನ್ನಿವೇಶದಲ್ಲಿಯೂ ಇದು ನಿಜವಾಯಿತು. ಬಂಡವಾಳಶಾಹಿ ಸಮಾಜದಲ್ಲಿ ಹೆಚ್ಚಿನ ದುಡಿಮೆಯಿದೆ. ಮಹಿಳೆಯರು ಉದ್ಯಮವಲಯವನ್ನು ಪ್ರವೇಶಿಸುವಂತಾಯಿತು. ಪುರುಷರಿಗೆ ಮಾತ್ರ ಮೀಸಲಿದ್ದ ಈ ಕ್ಷೇತ್ರಕ್ಕೆ ಮಹಿಳೆಯರನ್ನು ಪಾಲುದಾರರನ್ನಾಗಿ ಮಾಡಲು ಎರಡು ಮುಖ್ಯ ಕಾರಣಗಳಿದ್ದವು. ಮೊದಲನೆಯದು, ಮಹಿಳೆಯರು ಮನೆಯೊಳಗಿದ್ದುಕೊಂಡೇ ಕೆಲಸವನ್ನು ಮಾಡುವುದು. ಎರಡನೆಯದು, ಕಡಿಮೆ ವೇತನಕ್ಕೆ ಅವರಿಂದ ಹೆಚ್ಚು ಕೆಲಸವನ್ನು ಮಾಡಿಸಲು ಸಾಧ್ಯವಿರುವುದು.

ಒಳ್ಳೆಯ ಮಗಳು, ಒಳ್ಳೆಯ ಹೆಂಡತಿ, ಒಳ್ಳೆಯ ತಾಯಿ ಎಂದೆಲ್ಲಾ ಹೇಳಿಸಿಕೊಳ್ಳುತ್ತಾ ಬೆಳೆದ ಸಂಸ್ಕೃತಿಯ ಮಹಿಳೆಗೆ ಒಳ್ಳೆಯ ಕೆಲಸಗಾರ್ತಿ ಎಂಬ ಬಿರುದಿನೊಂದಿಗೆ ಅಲ್ಪ ಸಂಬಳದ ಚಕಾರವೆತ್ತುವ ದಾರ್ಷ್ಟ್ಯ ಸ್ವಭಾವವಿಲ್ಲದಿರುವುದು ಉದ್ಯೋಗದಾತರಿಗೆ ಅನುಕೂಲವೇ ಆಗಿತ್ತು. ಹಾಗಾಗಿ ಹೆಚ್ಚಿನ ಸಂಖ್ಯೆಯಲ್ಲಿ ಮಹಿಳೆಯರಿಗೆ ಉದ್ಯೋಗ ಅವಕಾಶಗಳು ಮೂಡಿದವು. ಉದ್ಯೋಗ ಕ್ಷೇತ್ರದಲ್ಲಿ ಮಹಿಳೆಯರ ಅವಶ್ಯಕತೆ ಇದ್ದುದರಿಂದ ಮಹಿಳಾ ಶಿಕ್ಷಣಕ್ಕೆ ಪ್ರೋತ್ಸಾಹ ನೀಡಲಾಯಿತು. ಬಂಡವಾಳಶಾಹಿಗೆ ಅನುಕೂಲಕರವಾಗಿ ಜಾಗತೀಕರಣವು ಮೂಡಿಬಂದಿತು. ಇದು ಮಾರುಕಟ್ಟೆಯ ವ್ಯಾಪ್ತಿಯನ್ನು ಹಿಗ್ಗಿಸಿತು. ಹೂಡಿಕೆ ಹಾಗೂ ಗಳಿಕೆಯೇ ಜಾಗತೀಕರಣದ ಮೂಲ ಉದ್ದೇಶವಾದರೂ ಅನಿವಾರ್ಯವೋ ಏನೋ ಎಂಬಂತೆ ಜನರ ಚಲನೆಯು ಜಗತ್ತಿನಾದ್ಯಂತ ಹರಡಿದುದರ ಫಲವಾಗಿ ಜ್ಞಾನ ಮಾದರಿಯ ಕೊಡುಕೊಳ್ಳುವಿಕೆ ನಿರಂತರವಾಗಿ ನಡೆಯುತ್ತಲೇ ಇದೆ ಎನ್ನಬಹುದು. ಈ ಹಿನ್ನೆಲೆಯಲ್ಲಿ ಶಿಕ್ಷಣದಲ್ಲಿ ಸಾಕಷ್ಟು ಮಾರ್ಪಾಡುಗಳು ಆದವು. ಅಲ್ಲದೆ ಮಹಿಳೆಯರು ಶಿಕ್ಷಣರಂಗಕ್ಕೆ ಕಾಲಿರಿಸುವ ಈ ತಾಣವನ್ನು ಸ್ತ್ರೀವಾದವು ತನ್ನ ಲಾಭಕ್ಕೆ ಸ್ವಲ್ಪಮಟ್ಟಿಗೆ ಬಳಸಿಕೊಂಡಿದೆ ಎನ್ನಬಹುದು.

ಸ್ತ್ರೀವಾದಿ ನೆಲೆಯಲ್ಲಿ ಶಿಕ್ಷಣರಂಗದಲ್ಲಿ ಆದ ಬದಲಾವಣೆಗಳು ಪ್ರಮುಖವಾಗುತ್ತವೆ. ಶಾಲಾಶಿಕ್ಷಣ ಶಿಕ್ಷಣದ ಪ್ರಥಮ ಹಂತ. ಇಂದಿಗೂ ಭಾರತದಲ್ಲಿ ಹೆಣ್ಣುಮಕ್ಕಳಿಗಾಗಿಯೇ ಮೀಸಲಿಟ್ಟ ಶಾಲೆಗಳಿವೆ. ಹಾಗೆಯೇ ಗಂಡುಮಕ್ಕಳಿಗೆಂದೇ ಮೀಸಲಿಟ್ಟ ಶಾಲೆಗಳಿವೆ. ಈ ಬಗೆಯ ಮೀಸಲು ದೃಷ್ಟಿಯೇ ಲಿಂಗತ್ವಭೇದದ ಸೂಚಕವಾಗಿದೆ. ಇನ್ನು ಸಹಶಿಕ್ಷಣವಿರುವ ಶಾಲೆಗಳಲ್ಲಿ ಹೆಣ್ಣು – ಗಂಡು ಎಂಬ ಭೇದದಲ್ಲಿಯೇ ಅನೇಕ ಚಟುವಟಿಕೆಗಳು ನಡೆಯುತ್ತವೆ. ಹಾಗಾಗಿ ಸ್ತ್ರೀಪುರುಷ ಸಮಾನತೆಯ ಅಂಶಗಳು ಶಾಲಾಮಟ್ಟದಲ್ಲಿ ಪ್ರಬಂಧ, ಭಾಷಣಸ್ಪರ್ಧೆಗಳ ವಿಷಯವಾಗಿ ಮಹಿಳಾದಿನಾಚರಣೆಯ ಆಚರಣೆಯ ಮಟ್ಟಕ್ಕೆ ಸೀಮಿತವಾಗಿದೆ. ಪದವಿ ಶಿಕ್ಷಣವು ಶಾಲಾ ಮಟ್ಟಕ್ಕಿಂತ ಸ್ತ್ರೀವಾದಿ ನೆಲೆಯಲ್ಲಿ ಸ್ವಲ್ಪ ಭಿನ್ನವಾಗಿದೆ. ಕೆಲವು ವಿಶ್ವವಿದ್ಯಾನಿಲಯಗಳು ಸ್ತ್ರೀಸಮಾನತೆಯ ಬಗ್ಗೆ ಅರಿವು ಮೂಡಿಸುವ ಉದ್ದೇಶದಿಂದ ಪದವಿ ತರಗತಿಗಳಲ್ಲಿ 'ಲಿಂಗಸಮಾನತೆ' ಯ ವಿಷಯವನ್ನು ಕಡ್ಡಾಯ ವಿಷಯವಾಗಿ ಪಠ್ಯಕ್ರಮದಲ್ಲಿ ಸೇರ್ಪಡೆಗೊಳಿಸಿವೆ. ಸಾಹಿತ್ಯ ವಿಷಯದ ವಿದ್ಯಾರ್ಥಿಗಳು ಸಾಹಿತ್ಯವನ್ನು ಸ್ತ್ರೀವಾದಿ ನೆಲೆಯಲ್ಲಿ ಅಭ್ಯಾಸಿಸುವುದು, ಸ್ತ್ರೀವಾದದ ಅರಿವಿಗೆ ಪುಷ್ಟಿ ನೀಡುತ್ತದೆ. ಲಿಂಗತ್ವ – ಸೂಕ್ಷ್ಮತೆ ಹಾಗೂ ಮಹಿಳಾ ಹಕ್ಕುಗಳ ಬಗ್ಗೆ ಕಾರ್ಯಾಗಾರಗಳನ್ನು ಕಾಲೇಜುಗಳಲ್ಲಿ ನಡೆಸಲಾಗುತ್ತದೆ. ಮಹಿಳೆಯರ ಸಮಸ್ಯೆಗಳ ಬಗ್ಗೆ ಅರಿವು ಮೂಡಿಸುವ ಕೆಲವೊಂದು ಕಾರ್ಯಕ್ರಮಗಳು ಈ ಹಂತದಲ್ಲಿ ನಡೆಯುತ್ತವೆ. ಪದವಿ ಮಟ್ಟದ ಎಲ್ಲ ಪ್ರಯತ್ನಗಳೂ ಮಹಿಳೆಯರ ತಾರತಮ್ಯದ ಕುರಿತು ಅರಿವು ಮೂಡಿಸುವುದಕ್ಕೆ ಮಾತ್ರ ಸೀಮಿತವಾಗಿದೆ ಎಂಬ ಅಂಶ ಗಮನಾರ್ಹ. ಸ್ತ್ರೀವಾದವೆನ್ನುವುದು ನಿಂತ ನೀರಾಗದೇ ಚಲನಶೀಲವಾಗಿದೆ. ಆದರೆ ಇಲ್ಲಿ ಒಂದು ಅಂಶವನ್ನು ಗಮನಿಸಬೇಕು ಸ್ತ್ರೀವಾದ ರಾಜಕೀಯ ಸಿದ್ಧಾಂತದ ದೃಷ್ಟಿಯಿಂದ ತನ್ನದೇ ಆದ ಮಿತಿಯನ್ನು ಹೊಂದಿದೆ. ಜಾಗತಿಕ ರಾಜಕೀಯ ಇತಿಮಿತಿಯ ಅರಿವಿದ್ದೇ ಅದು ಮಹಿಳೆಯರ ಸಮಾನತೆಯ ಹಕ್ಕೊತ್ತಾಯ ಹಾಗೂ ಹೋರಾಟವನ್ನು ನಡೆಸಬೇಕಾಗಿದೆ. ಇದು ಸ್ತ್ರೀವಾದದ ಅನಿವಾರ್ಯತೆ ಕೂಡ. ಬಹುಶಃ ಇಲ್ಲಿ ಶಿಕ್ಷಣ ಬಹುಮುಖ್ಯ ಪಾತ್ರವನ್ನು ವಹಿಸಬೇಕಾಗುತ್ತದೆ. ಸ್ತ್ರೀವಾದವು ಕೇವಲ ಮಾಹಿತಿಯಾಗಿ ವಿಷಯ ಪ್ರಸರಣದ ವಸ್ತುವಾಗಿ ಮಾತ್ರ ಶಿಕ್ಷಣದಲ್ಲಿ ಮೂಡಿ ಬಂದು ಕೇವಲ ಜಡ ಅಥವಾ ತಟಸ್ಥ ಕ್ರಿಯೆಯಾಗಿದೆ. ಶಿಕ್ಷಣವು ವಿದ್ಯಾರ್ಥಿಗಳನ್ನು ಸ್ತ್ರೀವಾದದ ತಾತ್ವಿಕತೆಗೆ ಪ್ರೇರೇಪಿಸುವ ನಿಟ್ಟಿನಲ್ಲಿರಬೇಕಾದ ಅಗತ್ಯವಿದೆ. ಇಲ್ಲವಾದಲ್ಲಿ ಸ್ತ್ರೀವಾದವು ಶಿಕ್ಷಣದಲ್ಲಿ ಕೇವಲ ಮಾಹಿತಿಯಾಗಿ ಉಳಿದು, ಸಮಾಜದಲ್ಲಿ ಸಮಾನತೆಯ ನೆಲೆಯಲ್ಲಿ ಹೆಚ್ಚಿನ ಬದಲಾವಣೆಗಳನ್ನು ತರಲು ಕಷ್ಟಸಾಧ್ಯವಾಗುತ್ತದೆ.



■ ಲೇಖನ
ಟಿ.ಪಿ.ಉಮೇಶ್
ಹೊಳಲ್ಕೆರೆ

Printed by: GOVINDAPPA.T Published by: DARSHAN.T Owned by: DARSHAN.T and Printed at: ASHAYA PRINTERS No.94, C.M.C. Colony, Yangammana Katte, Chitradurga-577 501, Chitradurga Dist, Karnataka state. Published at : No. 55 Ingaladal Main Street, Near Canara Banak , Ingaladal Village, Ingaladal Post - 577524, Chitradurga Tq, Chitradurga Dist, Karnataka state. Editor : DARSHAN.T